# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 33 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 16–08–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 33 | Title- Code: KARKAN 28269 | Chitradurga | Date: 16-08-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಲ್ಯಾಣಿ, ಕೆರೆಗಳ ಸ್ವಚ್ಛತೆ ಹಾಗೂ ಅಭಿವೃದ್ಧಿಗೆ ಯೋಜನೆ: ಸಚಿವ ಡಿ.ಸುಧಾಕರ್ 2

ದೇಶದ ಹಿರಿಮೆ, ಗರಿಮೆ ಎತ್ತಿಹಿಡಿಯುವ ಸಂಕಲ್ಪ ಮಾಡೋಣ: ಟಿ.ರಘುಮೂರ್ತಿ 3

ಮನುಷ್ಯ ಪ್ರಕೃತಿ ಉಳಿಸುವ ಕಾರ್ಯಮಾಡಬೇಕು: ಶಾಸಕ ಗೋವಿಂದಪ್ಪ 4



ಸುದ್ದಿ, ಜಾಹಿರಾತಿಗೆ 9686622252


### 78ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಭರವಸೆ

# ಗ್ಯಾರಂಟಿ ಯೋಜನೆಗಳು ಮುಂದುವರೆಯಲಿವೆ

» ಚಿತ್ರದುರ್ಗ

ಸರ್ಕಾರವು ಜನರ ಸರ್ವತೋಮುಖ ಏಳಿಗೆಗಾಗಿ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ನಿರಾತಂಕವಾಗಿ ಸಾಗುತ್ತಿದ್ದು, ಮುಂದೆಯೂ ಯಾವುದೇ ಅಡ್ಡಿಯಿಲ್ಲದೆ ಸಾಗುವ ಭರವಸೆಯನ್ನು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಡಿ.ಸುಧಾಕರ್ ನೀಡಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಗುರುವಾರ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ 78ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಅವರು, ಗೌರವ ರಕ್ಷೆ ಸ್ವೀಕರಿಸಿ ನಂತರ ತಮ್ಮ ಸ್ವಾತಂತ್ರ್ಯೋತ್ಸವದ ಸಂದೇಶ ನೀಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ 4.50 ಲಕ್ಷ, ಗೃಹಜ್ಯೋತಿ ಯೋಜನೆಯಡಿ 3.71 ಲಕ್ಷ, ಗೃಹಲಕ್ಷ್ಮೀ ಯೋಜನೆಯಡಿ 3.81 ಲಕ್ಷ, ಯುವನಿಧಿ ಯೋಜನೆಯಡಿ 4726 ಹಾಗೂ ಶಕ್ತಿ ಯೋಜನೆಯಡಿ 2.60 ಕೋಟಿ ಮಹಿಳೆಯರು ಸದುಪಯೋಗ ಪಡೆದುಕೊಂಡಿದ್ದಾರೆ. ಇಡೀ ದೇಶದಲ್ಲಿಯೇ ಮೊದಲು ಜಾರಿಗೆ ತಂದಿರುವ ಈ ಐದು ಗ್ಯಾರಂಟಿ ಯೋಜನೆಗಳು ಬಡವರನ್ನು, ಕೆಳವರ್ಗದ ಜನರನ್ನು, ಮಹಿಳೆಯರನ್ನು ಸಬಲೀಕರಿಸಿ ಸಮಾಜದ ಮುಖ್ಯ ವಾಹಿನಿಗೆ ತರಲು ಯಶಸ್ವಿಯಾಗುತ್ತಿವೆ. ಬಡತನವ ಬುಡಮಟ್ಟ ಕೀಳ ಬನ್ನಿ ಎಂದು ರಾಷ್ಟ್ರಕವಿ ಕುವೆಂಪುರವರು ಕರೆಕೊಟ್ಟಂತೆ ಬಡತನ ನಿರ್ಮೂಲನೆಗಾಗಿ, ಯುವಕರಿಗೆ ಉದ್ಯೋಗ ನೀಡುವುದಕ್ಕಾಗಿ ಮತ್ತು ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರುವುದಕ್ಕಾಗಿ ಈ ಯೋಜನೆಗಳನ್ನು ಜಾರಿಗೊಳಿಸಲಾಗಿರುತ್ತದೆ. ನುಡಿದಂತೆ ನಡೆದ ನಮ್ಮ ಸರ್ಕಾರ" ಎಂದು ಹೇಳಲು ನನಗೆ ಹೆಮ್ಮೆ ಎನಿಸುತ್ತದೆ ಎಂದು ಹೇಳಿದರು.


ಮಹಾತ್ವಾಕಾಂಕ್ಷೆ ಭದ್ರಾ ಮೇಲ್ದಂಡೆ ಯೋಜನೆಯು ಸಾಕಾರಗೊಳ್ಳುವ ದಿನಗಳು ಸಮೀಪಿಸುತ್ತಿವೆ. ಭದ್ರಾ ಮೇಲ್ದಂಡೆ ಯೋಜನೆಯ ತಾಂತ್ರಿಕ ತೊಡಕಾಗಿದ್ದ ಅಬ್ಬಿನಹೊಳಲು ಸ್ಥಳ ಸಮಸ್ಯೆಯನ್ನು ಜಲಸಂಪನ್ಮೂಲ ಸಚಿವರು ಹಾಗೂ ಉಪಮುಖ್ಯ ಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ, ರೈತರೊಂದಿಗೆ ಚರ್ಚಿಸಿ ಸಮಸ್ಯೆ ಇತ್ಯರ್ಥ ಪಡಿಸಿದ್ದಾರೆ. ಬಾಕಿ ಕಾಮಗಾರಿ ಪ್ರಾರಂಭಗೊಳಿಸಲಾಗಿದ್ದು, ತೀವ್ರ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಕಾಮಗಾರಿ ವೇಗ ಹೆಚ್ಚಿಸಲು ಸಾಧ್ಯವಾಗದ ಕಾರಣ, ಮುಂದಿನ ಮುಂಗಾರು ಅವಧಿ ಮುಕ್ತಾಯಗೊಳ್ಳುವುದರೊಳಗೆ ಚಿತ್ರದುರ್ಗ ಜಿಲ್ಲೆಗೆ ಭದ್ರಾ ಮೇಲ್ದಂಡೆ ಯೋಜನೆ ನೀರು ಹರಿಸುವ ಗುರಿ ಹೊಂದಲಾಗಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲೆಯ ಜೀವನಾಡಿಯಾಗಿರುವ ವಾಣಿವಿಲಾಸ ಸಾಗರ ಜಲಾಶಯಕ್ಕೆ ಪ್ರಸ್ತುತ ಭದ್ರಾ ಜಲಾಶಯದಿಂದ ಪ್ರತಿ ನಿತ್ಯ 700 ಕ್ಯೂಸೆಕ್ಸ್ ನೀರು ಹರಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎತ್ತಿನಹೊಳೆ ಯೋಜನೆ ಕಾಮಗಾರಿ ಪೂರ್ಣಗೊಳ್ಳುವವರೆಗೂ ಎತ್ತಿನಹೊಳೆ ಮುಖ್ಯ ಕಾಲುವೆ 32.50 ಕಿ.ಮೀದಲ್ಲಿ ಬೇಲೂರು ತಾಲ್ಲೂಕಿನ ಹೊಲಬಗೆರೆ ಗ್ರಾಮದ ಬಳಿಯ ಎಸ್ಕೇಪ್ ಮುಖಾಂತರ ಬೆಟ್ಟದ ಆಲೂರು ಹಳೇಬೀಡು ಕೆರೆ ಬೆಳವಾಡಿ ಕೆರೆ–ಮುಖಾಂತರ ವೇದಾವತಿ ನದಿಗೆ ಹರಿಸಿ ಅಲ್ಲಿಂದ ವಾಣಿವಿಲಾಸ ಸಾಗರ ಜಲಾಶಯ ತುಂಬಿಸುವ ಪ್ರಸ್ತಾವನೆ ಇದ್ದು, ಇದಲ್ಲದೇ ಲಿಂಗನಮಕ್ಕಿ ಜಲಾಶಯದಿಂದ ವಿದ್ಯುತ್ ಉತ್ಪಾದನೆ ನಂತರ ಸಮುದ್ರಕ್ಕೆ ಹರಿದು ಹೋಗುವ ಸುಮಾರು 40 ಟಿ.ಎಂ.ಸಿ. ನೀರನ್ನು ಬಳಸಿಕೊಂಡು ಬೆಂಗಳೂರಿಗೆ ಕುಡಿಯುವ ನೀರು ಪೂರೈಸುವ ಯೋಜನೆಗೆ ಸರ್ಕಾರ ಮುಂದಾಗಿದೆ. ಈ ಯೋಜನೆಯಲ್ಲಿಯೂ ಸಹ ವಾಣಿವಿಲಾಸ ಸಾಗರ ಜಲಾಶಯದಲ್ಲಿ ನೀರು ಶೇಖರಿಸಿ ನಂತರ ಬೆಂಗಳೂರಿಗೆ ನೀರೊಯ್ಯುವ ಪ್ರಸ್ತಾವನೆಯ ಸರ್ವೇ ಕಾರ್ಯ ಪ್ರಾರಂಭಿಸಲಾಗಿದೆ. ಒಟ್ಟಾರೆಯಾಗಿ ಮುಂದಿನ ದಿನಗಳಲ್ಲಿ ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಸಾಗರ ಜಲಾಶಯವು ಭರ್ತಿಯಾಗುವ ಎಲ್ಲಾ ಅವಕಾಶಗಳು ದಟ್ಟವಾಗಿದ್ದು, ಇದರಿಂದ ನಮ್ಮ ರೈತರ ಮೊಗದಲ್ಲಿ ಮಂದಹಾಸ ಮೂಡುವುದಲ್ಲದೇ ಮತ್ತು ಜಿಲ್ಲೆಯಲ್ಲಿನ ಅಂತರ್ಜಲ ಮಟ್ಟ ಹೆಚ್ಚಳವಾಗವುದು ಬಹುತೇಕ ನಿಶ್ಚಿತವಾಗಿದೆ ಎಂದು ಸಚಿವ ಡಿ.ಸುಧಾಕರ್ ಆಶ್ವಾಸನೆ ವ್ಯಕ್ತಪಡಿಸಿದರು.

ಬೆಳೆ ಸಮೀಕ್ಷೆಯಲ್ಲಿ ಜಿಲ್ಲೆ ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದೆ. ಪೂರ್ವ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 1,30,694 ರೈತರ ತಾಕುಗಳ ಪೈಕಿ 1,28,375 ತಾಕುಗಳ ಬೆಳೆ ಸಮೀಕ್ಷೆ ಪೂರ್ಣಗೊಂಡಿದೆ. 2023 ರ ಮುಂಗಾರು ಹಂಗಾಮಿನಲ್ಲಿ 81501 ರೈತರು ರೂ.284.22 ಕೋಟಿ ಬೆಳೆ ವಿಮೆ ಪಡೆದಿರುತ್ತಾರೆ. ಮತ್ತು 2024 ರ ಮುಂಗಾರು ಹಂಗಾಮಿನಲ್ಲಿ 1,12,101 ರೈತರು ಬೆಳೆ ವಿಮೆಗೆ ನೋಂದಣಿ ಮಾಡಿಸಿದ್ದು, ಜಿಲ್ಲೆಯು ರಾಜ್ಯದಲ್ಲಿ 8ನೇ ಸ್ಥಾನದಲ್ಲಿರುತ್ತದೆ. 2023 ರ ಮುಂಗಾರು ಹಂಗಾಮಿನಲ್ಲಿ 1,44,166 ರೈತರಿಗೆ ರೂ. 125.75 ಕೋಟಿಗಳನ್ನು ಪಾರದರ್ಶಕವಾಗಿ ಫ್ರೂಟ್ಸ್, ಪರಿಹಾರ್ ತಂತ್ರಾಂಶಗಳ ಮೂಲಕ ನೇರವಾಗಿ ರೈತರ ಖಾತೆಗಳಿಗೆ ಜಮಾ ಮಾಡಿರುವುದು ನಮ್ಮ ಸರ್ಕಾರದ ಹೆಮ್ಮೆಯಾಗಿರುತ್ತದೆ ಎಂದರು.

ರಾಜ್ಯ ಸರ್ಕಾರವು ಅಭಿವೃದ್ಧಿಗೆ ಬದ್ಧವಾಗಿದ್ದು ರಾಜ್ಯದ ಸಮಗ್ರ ಅಭಿವೃದ್ಧಿ, ಅದರಲ್ಲೂ ಗ್ರಾಮೀಣ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ರೈತರ ಮಕ್ಕಳ ವಿದ್ಯಾಭ್ಯಾಸಕ್ಕೆ ಸರ್ಕಾರ ಇತ್ತೀಚಿಗೆ ವಿದ್ಯಾರ್ಥಿ ವೇತನ ಘೋಷಿಸಿದೆ. ಸಂಧ್ಯಾ ಸುರಕ್ಷಾ ಯೋಜನೆಯಡಿ ವೃದ್ಧಾಪ್ಯ ವೇತನ, ವಿಧವಾ ವೇತನ, ವಿಕಲಚೇತನರ ಮಾಶಾಸನ ನೀಡುತ್ತಿರುವುದಲ್ಲದೇ, ಮಾತೃಪೂರ್ಣ ಯೋಜನೆ, ಪೊ□ಷಣ್ ಅಭಿಯಾನ ಯೋಜನೆ, ಪ್ರಧಾನಮಂತ್ರಿ ಮಾತೃವಂದನಾ ಯೋಜನೆ, ಸ್ತ್ರೀಶಕ್ತಿ ಯೋಜನೆ, ಸಾಂತ್ವಾನ ಯೋಜನೆಗಳ ಮುಖಾಂತರ ಮಹಿಳೆಯರು, ಆರ್ಥಿಕ ದುರ್ಬಲರು ಮತ್ತು ಹಿಂದುಳಿದ ವರ್ಗಗಳ ಏಳಿಗೆಗೆ ಸರ್ಕಾರವು ನಿರಂತರವಾಗಿ ಶ್ರಮಿಸುತ್ತಿದೆ.


ಪುಟ ↘ 2

## ಆಕರ್ಷಕ ಪಥ ಸಂಚಲನ

ಭಾರತ ಸ್ವಾತಂತ್ರ್ಯ ದಿನಾಚರಣೆಯ ಪಥ ಸಂಚಲನದಲ್ಲಿ ಡಿಎಆರ್ ಆ□□ಪಿಐ ಹೆಚ್.ಡಿ.ರುದ್ರೇಶ್ ಅವರು ಪೇರಡ್ ಕಮಾಂಡರ್ ಆಗಿ ಕಾರ್ಯನಿರ್ವಹಿಸಿದರು. ನಾಗರಿಕ ಪೊಲೀಸ್, ಸಶಸ್ತ್ರ ಪೊಲೀಸ್, ಅರಣ್ಯ, ಗೃಹ ರಕ್ಷಕ, ಎನ್.ಸಿ.ಸಿ. ಸೌಟ್ಸ್ ಮತ್ತು ಗೈಡ್ಸ್ ಸೇರಿದಂತೆ ಹಲವು ಶಾಲಾ ವಿದ್ಯಾರ್ಥಿಗಳು ಆಕರ್ಷಕ ಪಥ ಸಂಚಲನ ನಡೆಸಿದರು. ಪೊಲೀಸ್ ವಾದ್ಯ ವೃಂದ ಕವಾಯತಿನಲ್ಲಿ ಸುಶ್ರಾವ್ಯವಾಗಿ ವಾದ್ಯ ನುಡಿಸಿದರು.


## ದೇಶ ಪ್ರೇಮ ಅನಾವರಣಗೊಳಿಸಿದ ಸಾಂಸ್ಕೃತಿಕ ಕಾರ್ಯಕ್ರಮಗಳು

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ರಾಷ್ಟ್ರ ಧ್ವಜಾರೋಹಣ ತರುವಾಯ ಶಾಲಾ ಮಕ್ಕಳ ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರಲ್ಲಿ ದೇಶ ಪ್ರೇಮ ಅನಾವರಣಗೊಳಿಸಿದವು. ಕೋಟೆ ಸರ್ಕಾರಿ ಪ್ರೌಢ ಶಾಲಾ ವಿದ್ಯಾರ್ಥಿಗಳು ಕಿತ್ತೂರು ರಾಣಿ ಚೆನ್ನಮ್ಮನ ಬಲಗೈ ಬಂಟ ಶೂರ ಸಂಗೊಳ್ಳಿ ರಾಯಣ್ಣನ ಕುರಿತು ಹಾಗೂ ಪಿಳ್ಳೇಕೆರನಹಳ್ಳಿ ಬಾಪೂಜಿ ಪ್ರೌಢ ಶಾಲೆ ವಿದ್ಯಾರ್ಥಿಗಳು ಸುರಪುರ ವೆಂಕಟಪ್ಪ ನಾಯಕ ಜೀವನ ವೃತ್ತಾಂತದ ನೃತ್ಯ ರೂಪಕ ಪ್ರದರ್ಶಿಸಿದರು. ವಿದ್ಯಾ ವಿಕಾಸ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ದೇಶದ ಸಾಂಸ್ಕೃತಿಕ ವೈವಿಧ್ಯತೆ ಬಿಂಬಿಸುವ ನೃತ್ಯ ರೂಪಕ ನೋಡುಗರ ಮನಸೆಳೆಯಿತು.

























# ಕಲ್ಯಾಣಿ, ಕೆರೆಗಳ ಸ್ವಚ್ಛತೆ ಹಾಗೂ ಅಭಿವೃದ್ಧಿಗೆ ಯೋಜನೆ: ಸಚಿವ ಡಿ.ಸುಧಾಕರ್ ಸೂಚನೆ

» **ಚಿತ್ರದುರ್ಗ**

ಚಿತ್ರದುರ್ಗ ನಗರ ವ್ಯಾಪ್ತಿಯಲ್ಲಿನ ಹಾಗೂ ನಗರಕ್ಕೆ ಹೊಂದಿಕೊಂಡಿರುವ ಕಲ್ಯಾಣಿಗಳು, ಕೆರೆಗಳ ಸ್ವಚ್ಛತೆ ಹಾಗೂ ನೀರು ಕಲುಷಿತವಾಗುವುದನ್ನು ತಡೆಗಟ್ಟಲು ಅಗತ್ಯ ಯೋಜನೆ ರೂಪಿಸಿ, ಜಾರಿಗೊಳಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವಿವಿಧ ಅಧಿಕಾರಿಗಳೊಂದಿಗೆ ಏರ್ಪಡಿಸಿದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಮಾತನಾಡಿ, ನಗರದ ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರಿನಿಂದ ಸಂಭವಿಸಿದ ಅಹಿತಕರ ಘಟನೆಯನ್ನು ಲೋಕಾಯುಕ್ತರು ಗಂಭೀರವಾಗಿ ಪರಿಗಣಿಸಿದ್ದು, ನೀರಿನ ಮೂಲಗಳ ಸ್ವಚ್ಛತೆ, ಕೆರೆ, ಕಲ್ಯಾಣಿ, ಹೊಂಡಗಳ ಸ್ವಚ್ಛತೆಗೆ ಪ್ರಥಾದ್ಯತೆ ನೀಡುವಂತೆ ಸೂಚನೆ ನೀಡಿದ್ದಾರೆ ಎಂದರು, ಇದಕ್ಕೆ ಸ್ಪಂದಿಸಿದ ಜಿಲ್ಲಾ ಉಸ್ತುವಾರಿ ಸಚಿವರು ನಗರ ವ್ಯಾಪ್ತಿಯಲ್ಲಿನ ಸಂತೆಹೊಂಡ, ಮಠದ ಕೆರೆ, ಮಲ್ಲಾಪುರ ಕೆರೆ ಸೇರಿದಂತೆ ವಿವಿಧ ಕಲ್ಯಾಣಿ, ಕೆರೆಗಳು ಹಾಗೂ ಜಿಲ್ಲೆಯಲ್ಲಿನ ಕುಡಿಯುವ ನೀರಿಗಾಗಿ ಬಳಸುವ ಕೆರೆಗಳ ಸ್ವಚ್ಛತೆಗಾಗಿ ಅಗತ್ಯ ಯೋಜನೆ ರೂಪಿಸಬೇಕು, ಇದಕ್ಕಾಗಿ ಅಗತ್ಯವಿರುವ ಅನುದಾನವನ್ನು ಒದಗಿಸಲಾಗುವುದು ಎಂದು ಸೂಚನೆ ನೀಡಿದರು.ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಚಿತ್ರದುರ್ಗದ ಮಠದ ಕೆರೆ, ಬಳಿಕ ಮಲ್ಲಾಪುರ ಕೆರೆ, ಗೋನೂರು ಕೆರೆ, ರಾಣಿ ಕೆರೆ ಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕಿದೆ. ಈ ಕೆರೆಗಳು ಕಲುಷಿತವಾಗದಂತೆ ತಡೆಗಟ್ಟುವ ಕಾರ್ಯ ತ್ವರಿತವಾಗಿ ಆಗಬೇಕಿದೆ. ಸಂಬಂಧಿಸಿದ ಅಧಿಕಾರಿಗಳು ಈ ನಿಟ್ಟಿನಲ್ಲಿ ಯೋಜನೆಯನ್ನು ಶೀಘ್ರ ಅನುಷ್ಠಾನಗೊಳಿಸುವಂತೆ ಸೂಚನೆ ನೀಡಿದರು.

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್ ಪೀರ್ ಅವರು ಮಾತನಾಡಿ, ಚಿತ್ರದುರ್ಗದ ಮಠದ ಕೆರೆ ಅಭಿವೃದ್ಧಿಗಾಗಿ ಈಗಾಗಲೆ ಯೋಜನೆ ರೂಪಿಸಿ, ನೀಲನಕ್ಷೆ ಸಿದ್ಧವಾಗಿರಿಸಿಕೊಳ್ಳಲಾಗಿದೆ ಎಂದರು. ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಮಾತನಾಡಿ, ಕುಂಚಿಗನಾಳ್ ಬಳಿ ನಿರ್ಮಿಸಲಾಗುತ್ತಿರುವ ನೂತನ ಜಿಲ್ಲಾಡಳಿತ ಭವನದ ಕಾಮಗಾರಿ ಭರದಿಂದ ಸಾಗಿದ್ದು, ಕಾಮಗಾರಿ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಲಾಗಿದೆ, ಸಂಬಂಧಿಸಿದ ಗುತ್ತಿಗೆದಾರರು ಬರುವ ಮಾರ್ಚ್ ತಿಂಗಳಾಂತ್ಯದ ವೇಳೆಗೆ ಕಾಮಗಾರಿ ಪೂರ್ಣಗೊಳಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.ಸಭೆಯಲ್ಲಿ ಹಿರಿಯೂರು ನಗರ ಹಾಗೂ ಚಿತ್ರದುರ್ಗ ನಗರದ ಪ್ರಮುಖ ರಸ್ತೆಯನ್ನು ಹಂತ ಹಂತವಾಗಿ ಅಗಲೀಕರಣಗೊಳಿಸುವ ಕುರಿತಂತೆ ತೀವ್ರ ಚರ್ಚೆ ನಡೆಸಲಾಯಿತು.ಸಭೆಯಲ್ಲಿ ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ, ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ನಗರಸಭೆ ಪೌರಾಯುಕ್ತೆ ರೇಣುಕಾ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ಗ್ಯಾರಂಟಿ ಯೋಜನೆಗಳು ಮುಂದುವರೆಯಲಿವೆ









» **ಮೊದಲ ಪುಟದಿಂದ**

ಹಾಗೆಯೇ ಜಿಲ್ಲೆಯಲ್ಲಿ ಕೃಷಿ, ನೀರಾವರಿ, ಶಿಕ್ಷಣ, ಸಾರಿಗೆ-ಸಂಪರ್ಕ, ವಿಜ್ಞಾನ-ತಂತ್ರಜ್ಞಾನ, ಕೈಗಾರಿಕೆ, ಸಮಾಜ ಕಲ್ಯಾಣ ಹಿಂದುಳಿದ ವರ್ಗಗಳ ಅಭಿವೃದ್ಧಿ, ಅಲ್ಪ ಸಂಖ್ಯಾತರು, ಮಹಿಳೆಯರು, ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು. ಕಾರ್ಯಕ್ರಮದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸಿದ್ದರು. ಸಂಸದ ಗೋವಿಂದ ಎಂ.ಕಾರಜೋಳ ಘನ ಉಪಸ್ಥಿತಿ ವಹಿಸಿದ್ದರು. ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾ□□ಪೀರ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷಾ□□ಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ನೌಕರರು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಇದ್ದರು.

### ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆ



» **ಚಿತ್ರದುರ್ಗ**

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆಯನ್ನು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಚರಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಇದ್ದರು.

### ಪುಷ್ಪಗಿರಿಜಾಂಬ ನಿಧನ

» **ಚಳ್ಳಕೆರೆ**

ನಗರದ ಹಿರಿಯ ವಾಣಿಜ್ಯೋದ್ಯಮಿ ಎಸ್ಆರ್ ಲಾಡ್ಜ್ ಹಾಗೂ ರವಿಲಿಕ್ಕರ್ ಶಾಪ್ ಮಾಲೀಕ ಎಸ್.ರುದ್ರಮುನಿಯಪ್ಪನವರ ಧರ್ಮಪತ್ನಿ ಪುಷ್ಪಗಿರಿಜಾಂಬ(69) ಗುರುವಾರ ಬೆಳಗ್ಗೆ ಹೃದಯಘಾತದಿಂದ ಅವರ ಸ್ವಗೃಹದಲ್ಲಿ ಮೃತಪಟ್ಟಿರುತ್ತಾರೆ. ಪತಿ ಎಸ್.ರುದ್ರಮುನಿಯಪ್ಪ, ಇಬ್ಬರು ಪುತ್ರರು, ಒರ್ವಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅವರು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಭರಮಸಾಗರದ ಅವರ ತೋಟದಲ್ಲಿ ವೀರಶೈವ ಸಂಪ್ರದಾಯದಂತೆ ಗುರುವಾರ ಸಂಜೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಚಿತ್ರದುರ್ಗ ವಾರ್ತಾ ಭವನದಲ್ಲಿ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ರಾಷ್ಟ್ರ ಧ್ವಜರೋಹಣ ನೆರವೇರಿಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಿಬ್ಬಂದಿಗಳಾದ ವೇಣುಗೋಪಾಲ, ಜಿ.ವೆಂಕಟೇಶ್, ಎಸ್. ಚಂದ್ರಶೇಖರ್, ಎಂ.ಜೆ.ಬೋರೇಶ, ಆರ್.ತಿಮ್ಮಶೆಟ್ಟಿ, ಅಂಜಿನ ಮೂರ್ತಿ, ಅಪ್ರೆಂಟಿಸ್ ತರಬೇತಾರ್ಥಿ ಸಿ.ಕಾಟೇಶ್ ಇದ್ದರು.



ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಗುರುವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

## ಛಾಯಾಗ್ರಹಕರ ಸಂಘದ ವತಿಯಿಂದ 78ನೇ ಸ್ವಾತಂತ್ರ್ಯ ದಿನಾಚರಣೆ



» **ಚಿತ್ರದುರ್ಗ**

ಜಿಲ್ಲಾ ಛಾಯಾಗ್ರಾಹಕರ ಸಂಘದ ವತಿಯಿಂದ 78ನೇ ಸ್ವಾತಂತ್ರ್ಯ ದಿನದ ಸುಸಂದರ್ಭದಲ್ಲಿ ಜಿಲ್ಲಾ ಕಚೇರಿಯ ಮುಂಬಾಗ ಧ್ವಜಾರೋಹಣ ನೆರವೇರಿಸಲಾಯಿತು ನಂತರ ಸೇವೆಯಿಂದ ನಿವೃತ್ತಿ ಹೊಂದಿರುವ ಸೈನಿಕರಿಗೆ ಗೌರವ ಸಮರ್ಪಣೆ ಮಾಡಲಾಯಿತು ಮಾಜಿ ಸೈನಿಕರಾದ ಆರ್ ಹನುಮಂತರೆಡ್ಡಿ ಕಾಸರಹಟ್ಟಿ, ಗೋವಿಂದ ರೆಡ್ಡಿ ಚಿಕ್ಕ ಮಲ್ಲನ ಹೊಳೆ, ಪೆರ್ರಿಸ್ವಾಮಿ ಚಿಕ್ಕಯಗಟ್ಟಿ , ವೃಷಭೇಂದ್ರಪ್ಪ ಚಿಕ್ಕಗೊಂಡನಹಳ್ಳಿ ಇವರುಗಳಿಗೆ ಗೌರವ ಸಮರ್ಪಣೆ ಮಾಡಲಾಯಿತು, ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಸಂಘದ ಅಧ್ಯಕ್ಷರಾದ ಮುನ್ನ ಹಾಗೂ ಗೌರವಾಧ್ಯಕ್ಷರಾದ ಗಂಗಾಧರ್ ಮಾಜಿ ಸೈನಿಕರ ಸಂಘದ ಅಧ್ಯಕ್ಷರಾದ ಸತ್ಯನಾರಾಯಣ್ ಹಾಗೂ ಮಾಜಿ ಸೈನಿಕರ ಕುಟುಂಬದ ಸದಸ್ಯರು ಚಿತ್ರದುರ್ಗ ಜಿಲ್ಲಾ ಛಾಯಾಗ್ರಾಹಕರ ಸಂಘದ ಪ್ರಧಾನ ಕಾರ್ಯದರ್ಶಿ ನಾಗಣ್ಣ, ರಾಮಚಂದ್ರರೆಡ್ಡಿ , ಸತೀಶ್, ಮಂಜುನಾಥ , ಕುಮಾರ್, ರಘು, ಕಾಂತರಾಜ್, ತೀರ್ಥಾಚಾರ್, ಹರೀಶ್ ಇನ್ನುಳಿದ ಸಂಘದ ಸದಸ್ಯರು ಹಾಜರಿದ್ದರು.



ಚಳ್ಳಕೆರೆ ನಗರದ ಪಾವಗಡ ರಸ್ತೆಯ ಖಾಸಗಿ ಕಿರಾಣಿ ಅಂಗಡಿಯಲ್ಲಿ 78ನೇ ಸ್ವಾತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ಮೊಟ್ಟೆಯ ಟ್ರೈನಲ್ಲಿ ಬಾವುಟವನ್ನು ರಚಿಸಿ ಸಂಭ್ರಮಿಸಿದರು.

## ಅಹೋಬಲ ಟಿವಿಎಸ್‌ನಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ

» **ಚಿತ್ರದುರ್ಗ**

ನಗರದ ತುರುವನೂರು ರಸ್ತೆಯಲ್ಲಿರುವ ಶ್ರೀ ಅಹೋಬಲ ಟಿವಿಎಸ್ ಶೋ ರೂಂ ನಲ್ಲಿ 78 ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜರೋಹಣವನ್ನು ಉಪನ್ಯಾಸಕ ವಿಶ್ವನಾಥ್ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಶ್ವನಾಥ್ ನಮ್ಮ ದೇಶದಲ್ಲಿ ಭಾವೈಕ್ಯತೆ ಕೊರತೆ ಕಾಣುತ್ತಿದೆ. ಸ್ವಾತಂತ್ರ್ಯ ಪಡೆದು 78 ವರ್ಷ ಕಳೆದರು ಸಹ ಜಾತಿ ವ್ಯವಸ್ಥೆ , ವರ್ಣ ವ್ಯವಸ್ಥೆ ಹೆಚ್ಚುತ್ತಿರುವುದು ನೋವಿನ ಸಂಗತಿಯಾಗಿದೆ.

ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ತಮ್ಮ ಪ್ರಾಣವನ್ನೇ ತ್ಯಾಗ ಮಾಡಿ ಬ್ರಿಟಿಷ್ ವಿರುದ್ಧ ಹೋರಟ ಮಾಡಿ ನಮಗೆಲ್ಲ ಸ್ವಾತಂತ್ರ್ಯ ತಂದು ಕೊಟ್ಟಿದ್ದರು. ಆದರೆ ಸ್ವಾತಂತ್ರ್ಯ ಪಡೆಯುವಾಗ ಇದ್ದಂತಹ ಒಗ್ಗಟ್ಟು ಪ್ರಸ್ತುತ ದಿನಗಳಲ್ಲಿ ಕಾಣುತ್ತಿಲ್ಲ, ದೇಶ ಎತ್ತ ಸಾಗುತ್ತಿದೆ ಎಂಬುದನ್ನು ಮತ್ತೊಮ್ಮೆ ನಾವು ಪರಾಮರ್ಶೆ ಮಾಡಿಕೊಳ್ಳವ ಅವಶ್ಯತೆ ತುರ್ತಾಗಿ ಇದೆ. ಮನುಷ್ಯ ಸಂಬಂಧಗಳು ನಶಿಸುತ್ತಿದೆ. ವಯನಾಡ್ ಅಂತಹ ಒಂದು



ಅವಘಡ ಆದಾಗ ನಾವು ಸ್ಪಂದಿಸುವುದಕ್ಕಿಂತ ಎಲ್ಲಾ ವ್ಯವಸ್ಥೆ ಉತ್ತಮವಾಗಿದ್ದಾಗ ಮನುಷ್ಯ ಸಂಬಂಧಿಸಿದಗಳಿಗೆ ಸ್ಪಂದಿಸಿ, ಬೆಂಬಲಿಸಿದರ ಉತ್ತಮ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಅಹೋಬಲ ಟಿವಿಎಸ್ ಮಾಲೀಕ ಪಿ.ವಿ.ಅರುಣ್ ಕುಮಾರ್, ಬ್ಯಾಂಕ್ ಕಾಲೋನಿ ಮೋಹನ್, ಶ್ರೀ ಅಹೋಬಕ ಸ್ಟೀಲ್ ಅಂಡ್ ಸಿಮೆಂಟ್ ನ ಎಸ್.ಪಿ.ಮಂಜುಳ, ಬಿಡಿಎ□□□ಸ್ ಅಧ್ಯಕ್ಷ ಸಾಧಿಕ್, ಉದ್ಯಮಿ ಮಂಜುನಾಥ್ ಸ್ವಾಮಿ ಇದ್ದರು.

**ಪ್ರಮುಖ ಸುದ್ದಿ**

# ಮಕ್ಕಳಿಗೆ ಸಮವಸ್ತ್ರ ನೀಡಿದ ಸದ್ಗುರು ಆಯುರ್ವೇದ ಸಂಸ್ಥೆ

» **ಹೊಸದುರ್ಗ**

ತಾಲ್ಲೂಕಿನ ಮತ್ತೋಡು ಹೋಬಳಿಯ ಹಾಗಲಕೆರೆ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಸದ್ಗುರು ಆಯುರ್ವೇದ ಸಂಸ್ಥೆ ವತಿಯಿಂದ ಬುಧವಾರ ಉಚಿತವಾಗಿ ಸಮವಸ್ತ್ರವನ್ನು ಕೊಡುಗೆಯಾಗಿ ನೀಡಲಾಯಿತು.

ಇದೇ ಸಂದರ್ಭದಲ್ಲಿ ಸದ್ಗುರು ಆಯುರ್ವೇದಸಂಸ್ಥೆಯಮಾಲೀಕಡಿ.ಎಸ್. ಪ್ರದೀಪ್ ಮಾತನಾಡಿ, ಸೇವೆ ಮಾಡುವ ಕೈಗಳು ಮಾತನಾಡುವ ತುಟಿಗಳು ಶ್ರೇಷ್ಠ. ಸೇವೆ ಮಾಡುವ ಮನೋಭಾವನೆಯನ್ನು ಭಾರತೀಯರಾದ ನಾವು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು. ಅಂಬೇಡ್ಕರ್, ಗಾಂಧೀಜಿ ಇನ್ನಿತರ ಮಹಾತ್ಮರು ಹೇಳಿದಂತೆ ಆಧುನಿಕ ಜಗತ್ತಿನಲ್ಲಿ ಪ್ರಗತಿ ಕಾಣಲು ಶಿಕ್ಷಣವೇ ದೊಡ್ಡ ಅಸ್ತ್ರ. ನಾವು ಓದುವ ರಾಮಾಯಣ, ಮಹಾಭಾರತ ಹಾಗೂ ಇತರ ಗ್ರಂಥಗಳು ನಮ್ಮಲ್ಲಿ ಸಂಸ್ಕಾರ ಬೆಳೆಸಬೇಕು. ಆಗ ಓದಿದ್ದಕ್ಕೂ ಸಾರ್ಥಕವಾಗುತ್ತದೆ ಎಂಬುದನ್ನು ಮನವರಿಕೆ ಮಾಡಿದರು.



ಕೆಲವು ಗ್ರಾಮಗಳಲ್ಲಿ ತಮ್ಮ ಮಕ್ಕಳು ವಿದ್ಯಾಭ್ಯಾಸ ಮಾಡುವ ಗ್ರಾಮದ ಶಾಲೆಯ ಅಭಿವೃದ್ಧಿಯ ಕಡೆಗೆ ಗಮನ ನೀಡದೆ ಇರುವುದು ಬೇಸರ ತರಿಸಿದೆ. ದೇವಾಲಯಗಳು, ಮಂದಿರಗಳು ನಮಗೆ ಮನಸ್ಸಿಗೆ ನೆಮ್ಮದಿ ನೀಡಿದರೆ, ಶಾಲೆಗಳು ಮಕ್ಕಳಲ್ಲಿ ಜ್ಞಾನವನ್ನು ಬೆಳೆಸುತ್ತವೆ. ಧಾರ್ಮಿಕ ಕಾರ್ಯಗಳಿಗೆ ಮಹತ್ವ ನೀಡಿದಂತೆ, ಶೈಕ್ಷಣಿಕ ಕಾರ್ಯಗಳಿಗೆ ಕೈ ಜೋಡಿಸಿ ಎಂದು ಪೋಷಕರಲ್ಲಿ ಮನವಿ ಮಾಡಿದರು.ಆಧುನಿಕ ಜಗತ್ತಿನಲ್ಲಿ ಶಿಕ್ಷಣದಿಂದ ಪರಿವರ್ತನೆ ಸಾಧ್ಯ. ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯೆ ಇಲ್ಲವಾದರೆ, ಬದುಕು ಬಹಳ ಕಷ್ಟಕರವಾಗುತ್ತದೆ. ಪೋಷಕರು ಹೆಚ್ಚಿನದಾಗಿ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿ. ನಿಮ್ಮ ಶಾಲೆಗೆ ಬೇಕಾದಂತಹ ಮೂಲಭೂತ ಸೌಕರ್ಯಗಳನ್ನು ನಮ್ಮ ಸದ್ಗುರು ಆಯುರ್ವೇದ ಸಂಸ್ಥೆ ನೀಡಲು ಸಿದ್ಧವಿದೆ ಎಂದು ಭರವಸೆ ನೀಡಿದರು.

ಈ ವೇಳೆ ಗ್ರಾಮದ ಮುಖಂಡರಾದ ರಂಗನಾಥ್, ಮಹಾಲಿಂಗಪ್ಪ, ಎಸ್.ಡಿ.ಎಂ.ಸಿ ಉಪಾಧ್ಯಕ್ಷರಾದ ಗುರುಸಿದ್ದಯ್ಯ ಮತ್ತು ಮುಖ್ಯ ಶಿಕ್ಷಕರಾದ ರಂಗನಾಥ್ ಸೇರಿದಂತೆ ಸದಸ್ಯರು, ಶಾಲಾ ಶಿಕ್ಷಕರು, ಸಿಬ್ಬಂದಿಗಳು ಮತ್ತು ಗ್ರಾಮಸ್ಥರಿದ್ದರು.

## ಫಾಸ್ಟ್ ನ್ಯೂಸ್

### ಸಾಮಾಜಿಕ ಜಾಲತಾಣದಲ್ಲಿ ಸ್ಫೋಟಕ ಬೆದರಿಕೆ: ಪೃಧ್ವಿರಾಜ್ ಬಂಧನ

» ಚಳ್ಳಕೆರೆ

ಗಾಂಧಿನಗರ ನಿವಾಸಿ ಪೃಧ್ವಿರಾಜ್ ಇಲ್ಲಿನ ಪೊಲೀಸ್ ಠಾಣೆಯಲ್ಲಿ ತನ್ನ ತಾಯಿಯಿಂದ ದೂರು ಸ್ವೀಕರಿಸಲಿಲ್ಲವೆಂದು ಆರೋಪಿಸಿ ಸಾಮಾಜಿಕ ಜಾಲತಾಣಗಳ ಮೂಲಕ ಡಿಆರ್‌ಡಿಒ ಸೇರಿದಂತೆ ಇನ್ನಿತರ ಪ್ರತಿಷ್ಠಿತ ಸಂಸ್ಥೆಗಳನ್ನು ಬ್ಲಾಸ್ಟ್ ಮಾಡುವ ಬೆದರಿಕೆ ಒಡ್ಡಿದ್ದ. ಈ ಹಿನ್ನೆಲೆಯಲ್ಲಿ ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ಪೃಧ್ವಿರಾಜ್ ಮತ್ತು ಆತನ ಕುಟುಂಬ ವರ್ಗವನ್ನು ಕರೆಸಿ ವಿಚಾರಣೆ ನಡೆಸಿ ಕಾನೂನುಕ್ರಮದ ಎಚ್ಚರಿಕೆ ನೀಡಿದ್ದಲ್ಲದೆ, ಮುಂದಿನ ದಿನಗಳಲ್ಲಿ ಲೋಪವಾಗದಂತೆ ಮುಚ್ಚಳಿಕೆ ಬರೆದುಕೊಡುವುದರೊಂದಿಗೆ ಸಾಮಾಜಿಕ ಜಾಲತಾಣದಲ್ಲೂ ಕ್ಷಮೆ ಕೇಳಬೇಕೆಂದು ಸೂಚಿಸಿದ್ದರು. ಪೃಧ್ವಿರಾಜ್ ಸಹ ಸಾಮಾಜಿಕ ಜಾಲತಾಣದಲ್ಲಿ ಕ್ಷಮಾಪಣೆ ಕೋರಿದ್ದ. ಆದರೆ, ಆ.14ರ ಬೆಳಗ್ಗೆ ಬೆಂಗಳೂರಿನ ವಿಧಾನಸೌಧ ಮುಂಭಾಗದಲ್ಲಿ ಮೋಟಾರ್‌ಬೈಕ್‌ಗೆ ಬೆಂಕಿ ಹಚ್ಚಿದ್ದಲ್ಲದೆ, ಪೊಲೀಸ್ ಇಲಾಖೆ ಕಾರ್ಯವೈಖರಿಯ ಬಗ್ಗೆ ಅಸಮದಾನ ವ್ಯಕ್ತಪಡಿಸಿದ್ದ. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ವಿಧಾನಸೌಧ ಪೊಲೀಸರು ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಚಳ್ಳಕೆರೆ ಠಾಣೆಯಲ್ಲಿ ಆತನ ತಾಯಿ ನೀಡಿದ ದೂರು ದಾಖಲಿಸದ ಹಿನ್ನೆಲೆಯಲ್ಲಿ ಕರ್ತವ್ಯ ಆರೋಪದಡಿ ಎಎಸ್‌ಐ ಎಲ್.ಮುಸ್ತೂರಪ್ಪನವರನ್ನು ಸೇವೆಯಿಂದ ಅಮಾನತ್ತು ಮಾಡಲಾಗಿದೆ.



ಚಳ್ಳಕೆರೆ ನಗರದ ವಾಸವಿ ದೇವಸ್ಥಾನದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ವಾಸವಾಂಭೆ ದೇವಿಗೆ ವಿಶೇಷ ಭಾರತಾಂಭೆಯ ವೇಷದಲ್ಲಿ ಪೂಜೆ ನಡೆಸಲಾಯಿತು.

### ಶಾಲಾ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಣೆ



» ಹೊಸದುರ್ಗ

ಭಾರತದ ಪ್ರಜೆಗಳಾದ ನಾವುಗಳು ಯಾರಿಗೂ ಸಹಾ ಅಧೀನರಾಗಿ ಇಲ್ಲದಿರುವುದೇ ನಿಜವಾದ ಸ್ವಾತಂತ್ರ್ಯ ಎಂದು ಬೆಂಗಳೂರಿನ ಲಿಬ್ರ ಗ್ರೋಫ್ ಆಫ್ ಕಂಪನಿಯ ಮಾಲಿಕ ಹಾಗೂ ಸಮಾಜ ಸೇವಕ ರಂಗೈನೂರು ರಾಜಪ್ಪ ಟಿ. ತಿಳಿಸಿದರು.

ತಾಲೂಕಿನ ರಂಗೈನೂರು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಆಯೋಜಿಸಲಾದ್ದ 78 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಣೆ ಮಾಡಿ ಮಾತನಾಡಿದರು.

ವ್ಯಕ್ತಿಯ ಪ್ರತಿಯೊಂದು ನಿರ್ಧಾರವು ಸ್ವ-ಇಚ್ಚೆಯಿಂದ ಕೂಡಿದ್ದು ಪ್ರತಿಬಿಂಬವಾಗಿದ್ದರೆ ಮಾತ್ರ ಆ ವ್ಯಕ್ತಿ ಸ್ವತಂತ್ರನಾಗಿದ್ದಾನೆ ಎಂಬಂತಾಗುತ್ತದೆ, ಸ್ವಾತಂತ್ರ್ಯ ಎಂದರೆ ಯಾರೂ ಸಹಾ ಕೋಡುವಂತಹದಲ್ಲ, ಇದನ್ನು ಯಾರೂ ಸಹಾ ಕೊಡಲಿಕ್ಕೆ ಬರುವುದು ಇಲ್ಲಾ, ಅದು ನಮ್ಮೊಳಗೆ ಸೃಷ್ಟಿಯಾಗಬೇಕಾದರೆ ನಾವು ಸ್ವಾಭಿಮಾನದಿಂದ ಬದುಕಬೇಕು ಎಂದು ಕರೆ ನೀಡಿದ ಅವರು ಸ್ವಾತಂತ್ರ್ಯಕ್ಕಾಗಿ ನಾಡಿನ ಸಾಕಷ್ಟು ಮಹಾತ್ಮರು ಹೋರಾಡಿ ಹುತಾತ್ಮರಾಗಿದ್ದಾರೆ 78 ವರ್ಷಗಳ ಹಿಂದೆ ಬ್ರಿಟೀಷರ ಕಪಿ ಮುಷ್ಟಿಯಲ್ಲಿದ್ದ ನಮ್ಮನ್ನ ಬಿಡಿಸಿದ್ದಾರೆ. ಉಪ್ಪಿನ ಸತ್ಯಾಗ್ರಹದ ಮೂಲಕ ಹೋರಾಟ ನಡೆಸಿದ ಮಹತ್ಮ ಗಾಂಧೀಜಿಯವರಂತಹ ಸಾಕಷ್ಟು ಮಂದಿ ಹೋರಾಟ ಮಾಡಿ ನಮಗೆ ಸ್ವಾತಂತ್ರ್ಯವನ್ನ ತಂದು ಕೊಟ್ಟಿದ್ದಾರೆ ಇಂತಹ ಅಮೂಲ್ಯವಾದ ಸ್ವಾತಂತ್ರ್ಯವನ್ನ ಯಾವ ಸ್ವಾರ್ಥವೂ ಇಲ್ಲದೆ ತಂದು ಕೋಟ್ಟಿರುವ ಸ್ವಾತಂತ್ರ್ಯವನ್ನ ಉಳಿಸಿಕೋ\ಂಡು ಹೊಗಬೇಕಿದ್ದು ಇಂದು ನಮ್ಮ ಮುಂದೆಯೇ ನಡೆಯುತ್ತಿರುವ ಸಾಕಷ್ಟು ಅನ್ಯಾಯಗಳನ್ನ ತಡೆಯುವ ಮೂಲಕ ಸ್ವಾತಂತ್ರ್ಯವನ್ನ ಉಳಿಸಿಕೊಳ್ಳಬೇಕಿದೆ ಎಂದು ಕರೆ ನೀಡಿದರು.

ಶಾಲೆಯ ಮುಖ್ಯ ಶಿಕ್ಷಕ ರಾಜಪ್ಪ ಅಧ್ಯಕ್ಷತೆ ವಹಿಸಿದ್ದರು.ಕಾರ್ಯಕ್ರಮದಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷ ತಿಪ್ಪೇಶ್, ಗ್ರಾಮ ಪಂಚಾಯತಿ ಸದಸ್ಯರುಗಳಾದ ಲಕ್ಕಮ್ಮ, ಜಗದೀಶ್, ಸಹ ಶಿಕ್ಷಕಿ ರತ್ನಮ್ಮ, ಅಂಗನವಾಡಿ ಶಿಕ್ಷಕಿ ಪ್ರೇಮ, ಸಹಾಯಕಿ ಶೈಲ ಸೇರಿದಂತೆ ಗ್ರಾಮದ ಮುಖಂಡರುಗಳು ಗ್ರಾಮಸ್ಥರು,ಯುವಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಅಹಿಂಸಾತ್ಮಕ ಹೋರಾಟದ ಫಲವೇ ಸ್ವಾತಂತ್ರ್ಯೋತ್ಸವ

# ದೇಶದ ಹಿರಿಮೆ, ಗರಿಮೆ ಎತ್ತಿಹಿಡಿಯುವ ಸಂಕಲ್ಪ ಮಾಡೋಣ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಭಾರತೀಯರ ಪಾಲಿಗೆ 78ನೇ ಸ್ವಾತಂತ್ರ್ಯೋತ್ಸವ ಮರೆಯಲಾಗದ ದಿನವಾಗಿದೆ. ನಮ್ಮ ಪೂರ್ವಜನರು ಮಾಡಿದ ತ್ಯಾಗ, ಬಲಿದಾನವೇ ಕಾರಣ. ಮಹಾತ್ಮಗಾಂಧಿಜಿಯವರ ಅಹಿಂಸಾತ್ಮಕ ಹೋರಾಟದ ಫಲವೇ ನಮ್ಮ ಈ ಸ್ವಾತಂತ್ರ್ಯೋತ್ಸವ. ನಾವೆಲ್ಲರೂ ಹಿರಿಯ ಸೇವೆ,ಆದರ್ಶಗಳನ್ನುಮೈಗೂಡಿಸಿಕೊಂಡು ನವ ಸಮಾಜದ ನಿರ್ಮಾಣಕ್ಕೆ ಸಂಕಲ್ಪ ಮಾಡೋಣವೆಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ನಗರ ಬಿ.ಎಂ.ಸರ್ಕಾರಿ ಪ್ರೌಢಶಾಲಾ ರಂಗಮಂದಿರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ 78ನೇ ಸ್ವಾತಂತ್ರ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಸ್ತುತ ರಾಜ್ಯ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಾಡಿನ ಬಡ ಜನರ ಕಲ್ಯಾಣಕ್ಕಾಗಿ ಅನೇಕ ಯೋಜನೆ ರೂಪಿಸಿದೆ. ಶಕ್ತಿ ಯೋಜನೆ, ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಯುವ ನಿಧಿ ಮುಂತಾದ ಯೋಜನೆಗಳು ಬಡ ಜನರನ್ನು ಸಂಕಷ್ಟದಿಂದ ಮುಕ್ತಗೊಳಿಸಿವೆ. ಪ್ರಸ್ತುತ ರಾಜ್ಯ ಸರ್ಕಾರ ಜನಪರ ಸರ್ಕಾರವಾಗಿ ರೂಪುಗೊಂಡಿದೆ ಎಂದರು.



ಧ್ವಜಾರೋಹಣ ನೆರವೇರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, 78ನೇ ಸ್ವಾತಂತ್ರ್ಯೋತ್ಸವ ನಮ್ಮೆಲ್ಲರಿಗೂ ಹೆಮ್ಮೆ ತಂದಿದೆ. ಇಂದಿನ ಎಲ್ಲಾ ಸಂಭ್ರಮದ ಹಿಂದೆ ಸ್ವಾತಂತ್ರ್ಯಕ್ಕಾಗಿ ಪ್ರಾಣತ್ಯಾಗ ಮಾಡಿದ ಸಾವಿರಾರು ಜನರು ತ್ಯಾಗವಿದೆ. ಸ್ವಾತಂತ್ರ್ಯ ಪಡೆಯಲು ಬೀದಿಗಿಳಿದು ಹೋರಾಟ ನಡೆಸಿದ ಮುಗ್ಧ ಹೋರಾಟಗಾರರ ಸೇವೆಯನ್ನು ನಾವು ಮರೆಯಲು ಸಾಧ್ಯವಿಲ್ಲ. ದೇಶದ ಅಭಿವೃದ್ಧಿಪರ ಚಿಂತನೆಗಳಿಗೆ ನಾವೆಲ್ಲರೂ ಕೈಜೋಡಿಸೋಣವೆಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ 11 ಜನರನ್ನು ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಕ್ಷೇತ್ರದಿಂದ ಸುಧಾಮೂರ್ತಿ, ಕ್ರೀಡೆಯಿಂದ ಖೋ-ಖೋ ಪ್ರಶಾಂತ್, ಕೃಷಿ ಕ್ಷೇತ್ರ ದೇವರಪಾಲಯ್ಯ, ಮಾಧ್ಯಮ ಕ್ಷೇತ್ರ ಕೆ.ಎಂ.ಶಿವಸ್ವಾಮಿ, ತಾಲ್ಲೂಕು ಪಂಚಾಯಿತಿ ಕಚೇರಿಯ ನರಸಿಂಹಪ್ಪ, ಆರೋಗ್ಯ ಇಲಾಖೆ ಡಾ.ಎನ್.ಕಾಶಿ, ಕಂದಾಯ ಇಲಾಖೆಯ ಗಿರೀಶ್, ಕುಡಿಯುವ ನೀರು ಇಲಾಖೆ ತಿಪ್ಪೇಸ್ವಾಮಿ, ಪೌರಕಾರ್ಮಿಕರಾದ ತಿಪ್ಪೇಸ್ವಾಮಿ, ನಾಗರಾಜು, ಉಮೇಶ್, ಪಾರ್ವತಮ್ಮ, ತಿಪ್ಪೇಸ್ವಾಮಿ, ಸಮಾಜ ಸೇವೆ ಸಿ.ಶಶಿಧರವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಇಒ ಶಶಿಧರ, ಬಿಇಒ ಕೆ.ಎಸ್.ಸುರೇಶ್, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಪೌರಾಯುಕ್ತ ಎಚ್.ಜಿ.ಜಗರೆಡ್ಡಿ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಪಿ.ಎಲ್.ಲಿಂಗೇಗೌಡ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಯ್ಯ, ನಗರಸಭಾ ಸದಸ್ಯರಾದ ವೈ.ಪ್ರಕಾಶ್, ಟಿ.ಮಲ್ಲಿಕಾರ್ಜುನ್, ಎಸ್. ಜಯಣ್ಣ, ಶಿವಕುಮಾರ್, ಕವಿತಾ, ಸುಜಾತ, ಪ್ರಮೋದ್, ಶ್ರೀನಿವಾಸ್, ಎಂ.ನಾಗಮಣಿ, ಎಂ.ಜೆ.ರಾಘವೇಂದ್ರ, ಸಾವಿತ್ರಮ್ಮ, ಚಳ್ಳಕೆರೆಯಪ್ಪ, ಪಾಲಮ್ಮ, ನಾಮಿನಿ ಸದಸ್ಯರಾದ ಬಡಗಿಪಾಪಣ್ಣ, ಮಹಮ್ಮದ್ ಅನ್ವರ್, ನೇತಾಜಿಪ್ರಸನ್ನ, ಆರ್.ವೀರಭದ್ರಪ್ಪ, ನಟರಾಜು, ಕೃಷಿ ಅಧಿಕಾರಿ ಅಶೋಕ್, ಕಾರ್ಮಿಕ ಅಧಿಕಾರಿ ಕುಸುಮ, ಪಶುವೈದ್ಯಾಧಿಕಾರಿ ರೇವಣ್ಣ ಮುಂತಾದವರು ಉಪಸ್ಥಿತರಿದ್ದರು.

ಎಸ್.ಕೆ.ಬಿ ಅಭಿಮಾನಿ ಬಳಗದ ವತಿಯಿಂದ ಸಂಸದರಿಗೆ ಅಭಿನಂದನ ಸಮಾರಂಭ

# ಗ್ಯಾರಂಟಿಗಳ ನಿಲ್ಲಿಸಬೇಕೆಂದು ಶಾಸಕರ ದಂಡು ದೆಹಲಿ ಕಡೆಗೆ ಹೊರಟಿದೆ: ಸಂಸದ ಕಾರಜೋಳ

» ಚಿತ್ರದುರ್ಗ

ರಾಜ್ಯ ಸರ್ಕಾರ ಜನರಿಗೆ ನೀಡುತ್ತಿರುವ ಗ್ಯಾರಂಟಿ ಯೋಜನೆಗಳನ್ನ ನಿಲ್ಲಿಸಬೇಕೆಂದು ಕಾಂಗ್ರೆಸ್ ಕೆಲ ಶಾಸಕರು ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ರವರನ್ನು ಭೇಟಿ ಮಾಡಿ ಚರ್ಚಿಸಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ಅವರು ತಿಳಿಸಿದರು.

ನಗರದ ಹೊರವಲಯದ ವೈಭವ ಗಾರ್ಡನ್ನ ಸಭಾಂಗಣದಲ್ಲಿ ಆಯೋಜಿಸಿದ ಎಸ್ ಕೆ ಬಿ ಅಭಿಮಾನಿ ಬಳಗದ ವತಿಯಿಂದ ಸಂಸದ ಗೋವಿಂದ ಕಾರಜೋಳ ರವರಿಗೆ ಅಭಿನಂದನಾ ಸಮಾರಂಭದಲ್ಲಿ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು, ರಾಜ್ಯ ಸರ್ಕಾರ ನೀಡುತ್ತಿರುವ ಗ್ಯಾರಂಟಿ ಯೋಜನೆಗಳಿಂದ ನಮ್ಮ ಕ್ಷೇತ್ರಗಳನ್ನು ನಾವು ಅಭಿವೃದ್ಧಿ ಪಡಿಸಲು ಸಾಧ್ಯವಾಗುತ್ತಿಲ್ಲ ಹಾಗಾಗಿ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಬೇಕಾಗಿದೆ ಎಂದು ದೆಹಲಿಯುತ್ತ ತೆರಳಿದ್ದಾರೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಆಡಳಿತ ಚುಕ್ಕಾಣಿಯನ್ನು ಹಿಡಿದಿರುವ ನರೇಂದ್ರ ಮೋದಿ ಅವರು ಸುಭದ್ರ ಸರ್ಕಾರ ನಡೆಸುತ್ತಿದ್ದಾರೆ ಜನರ ಒಳಿತಿಗಾಗಿ ಸಾಕಷ್ಟು ಯೋಜನೆಗಳನ್ನು ರೂಪಿಸುತ್ತಿದ್ದಾರೆ ರೈತರಿಗೆ ಅನುಕೂಲವಾಗುವಂತಹ ಕಿಸಾನ್ ಯೋಜನೆ, ಫಸಲ್ ಭೀಮಾ ಯೋಜನೆ, ಮುದ್ರಾ ಯೋಜನೆ ಹಾಗೂ ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ಮಹಿಳೆಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಉಚಿತ ಗ್ಯಾಸ್ ಗಳನ್ನು ನೀಡಿ ಭಾರತ ರಾಷ್ಟ್ರವನ್ನು ಅಭಿವೃದ್ಧಿ ರಾಷ್ಟ್ರವನ್ನಾಗಿ ಸಾಕಷ್ಟು ಶ್ರಮವಹಿಸಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಆದಗೆಟ್ಟಿದೆ ಕಾಂಗ್ರೆಸ್ ಸರ್ಕಾರ ಜನಗಳ ಮಧ್ಯೆ ವಿಷ ಬೀಜಗಳನ್ನು ಬಿತ್ತಿ ಸಮಾಜದಲ್ಲಿ ಅಹಿತಕರ ಘಟನೆಗಳು ನಡೆಯುವಂತೆ ಪ್ರೇರೇಪಿಸುತ್ತಿದ್ದಾರೆ. ರಾಜ್ಯದ ಖಜಾನೆಯನ್ನು ಲೂಟಿ ಮಾಡಿ ಎಸ್ಸಿ-ಎಸ್ಟಿ ಸಮುದಾಯದ ಹಣಗಳನ್ನ ದುರ್ಬಳಿಕೆ ಮಾಡಿಕೊಂಡಿದ್ದಾರೆಆದರೆಸಿದ್ದರಾಮಯ್ಯನವರು ಇದು ಬಡವರ ಸರ್ಕಾರ ಎಂದು ಜನರನ್ನು



ನಂಬಿಸುತ್ತಿದ್ದಾರೆ ಎಂದು ಕಾಂಗ್ರೆಸ್ ವಿರುದ್ಧ ಗುಡುಗಿದರು.

ಕಾಶ್ಮೀರವನ್ನ ನಮ್ಮದೇ ಅಲ್ಲ ಎಂದು ಕಾಂಗ್ರೆಸ್ನವರು ಇದರ ಬಗ್ಗೆ ಕಾಳಜಿಯನ್ನೇ ವಹಿಸಿರಲಿಲ್ಲ ಆದರೆ ನರೇಂದ್ರ ಮೋದಿ ಅವರು ಕಾಶ್ಮೀರ ಭಾರತ ದೇಶದ ಕಿರೀಟ ಅದನ್ನು ಬಿಟ್ಟುಕೊಡುವ ಮಾತೇ ಇಲ್ಲ ಯನ್ನುವುದರ ಮೂಲಕ ಭಾರತ ದೇಶವನ್ನು ಒಕ್ಕೂಡಿಸಿ ಎಲ್ಲರೂ ನಮ್ಮವರೇ ನಾವು ಎಲ್ಲರನ್ನೂ ಪ್ರೀತಿಸುತ್ತೇವೆ ಎನ್ನುವ ಕೋಶ ವಾಕ್ಯವನ್ನು ಮುಳುಗಿಸುವುದರ ಮೂಲಕ ದೇಶದ ಅಭಿವೃದ್ಧಿ ಕಡೆಗೆ ಸಾಗಿದ್ದಾರೆ ಎಂದು ಹೇಳಿದರು.

ಮಾಜಿ ಶಾಸಕ ಎಸ್.ಕೆ ಬಸವರಾಜನ್ ಮಾತನಾಡಿ ಸುಮಾರು 350 ಕಿಲೋಮೀಟರ್ ದೂರದಿಂದ ಬಂದಂತಹ ಗೋವಿಂದ ಕಾರಜೋಳರವರ ಗೆಲುವು ಅಭೂತಪೂರ್ವಾದುದ್ದು, ಜನರು ಹಣವನ್ನು ನೋಡಲಿಲ್ಲ ಆದರೆ ವ್ಯಕ್ತಿ ಮತ್ತು ವ್ಯಕ್ತಿಯ ಹಿಂದೆ ಇರುವ ಸರ್ಕಾರವನ್ನು ನೋಡಿ ಗೋವಿಂದ ಕಾರಜೋಳರವರನ್ನ ಸಂಸದರನ್ನಾಗಿ ಚಿತ್ರದುರ್ಗ ಲೋಕಾಸಭಾ ಕ್ಷೇತ್ರದ ಮತದಾರರು ಆಯ್ಕೆ ಮಾಡಿ ಸಂಸದಿಗೆ ಕಳಿಸಿದ್ದಾರೆ ಎಂದರು.

ಚಿತ್ರದುರ್ಗದಲ್ಲಿ ನೆನೆಗುದಿಗೆ ಬಿದ್ದಿದ್ದಂತ ಭದ್ರಾ ಮೇಲ್ದಂಡೆ ಯೋಜನೆ, ರೈಲ್ವೆ ಯೋಜನೆ, ಕೈಗಾರಿಕೋದ್ಯಮ ಯೋಜನೆ, ಪ್ರವಾಸೋದ್ಯಮ ಹಾಗೂ ಕೇಂದ್ರೀಯ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ಮಂಜೂರಾತಿಗೆ ಸಂಸತ್ತಿನ ಅಧಿವೇಶನದಲ್ಲಿ ಧ್ವನಿ ಎತ್ತಿದ ಧೀಮಂತ ರಾಜಕಾರಣರು ಗೋವಿಂದ ಕಾರಜೋಳರವರು ಸಾಧನೆ ಶ್ಲಾಘನೀಯವಾದದ್ದು ಎಂದರು.

ಸಂಸದರಿಗೆ ವಯಸ್ಸು ಆಗಿರಬಹುದು ಆದರೆ ಅವರ ಜ್ಞಾಪಕ ಶಕ್ತಿ ಮಿಂಚಿನಂತೆ ಕೆಲಸ ಮಾಡುತ್ತಿದೆ ಜಿಲ್ಲೆಯ ಸಾಕಷ್ಟು ಸಮಸ್ಯೆಗಳನ್ನು ಪಟ್ಟಿ ಮಾಡಿಕೊಂಡು ಅವುಗಳ ಅಭಿವೃದ್ಧಿಗೆ ಈಗಾಗಲೇ ಪಣತೊಟ್ಟಿದ್ದಾರೆ ಇಂತಹ ನಾಯಕ ನಮ್ಮೊಡನೆ ಇರುವುದು ಅತ್ಯಂತ ಸಂತಸದ ವಿಚಾರ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಮುರಳಿ ಮಾತನಾಡಿ ಸಾಮಾನ್ಯ ನಾಯಕರಲ್ಲಿ ಸಾಮಾನ್ಯ ನಾಯಕರಾಗಿ ಕೆಲಸ ಮಾಡುತ್ತಿರುವ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದರು ನಮಗೆ ದೊರಕಿರುವುದು ಅತ್ಯಂತ ಸಂತಸದ ವಿಚಾರ ರಾಜಕಾರಣದಲ್ಲಿ ಅನುಭವಿ ರಾಜಕಾರಣಿ ಇವರು, ರಾಜ್ಯ ಮತ್ತು ಕೇಂದ್ರ ರಾಜಕಾರಣದಲ್ಲಿ ಇವರದ್ದೆಯಾದ ಚಣಕ್ಷತೆ ಇದೆ ಹಾಗಾಗಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮತದಾರರು ಇವರನ್ನು ಹಚ್ಚಿಕೊಂಡು ಮೆಚ್ಚಿಕೊಂಡು ಸಂಸದರನ್ನಾಗಿ ಮಾಡಿಕೊಂಡಿದ್ದಾರೆ ಎಂದರು.

## ಕರಡಿದಾಳಿಗೆ ತುತ್ತಾಗಿ ಚಿಕಿತ್ಸೆ ಪಡೆಯುತ್ತಿದ್ದ ಓಂಕಾರಪ್ಪ ಸಾವು

» ಚಳ್ಳಕೆರೆ



ತಾಲ್ಲೂಕಿನ ತಳಕು ಹೋಬಳಿಯ ಸಿರಿವಾಳಓಬಳಾಪುರ ಗ್ರಾಮದ ಹೊರವಲಯದಲ್ಲಿ ಎಮ್ಮೆ ಮೇಯಿಸುವ ಸಂದರ್ಭದಲ್ಲಿ ಕರಡಿದಾಳಿಗೆ ತುತ್ತಾಗಿ ರಕ್ತಗಾಯಗೊಂಡು ಚಳ್ಳಕೆರೆ, ಚಿತ್ರದುರ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ದಾಖಲಾಗಿದ್ದ ಓಂಕಾರಪ್ಪ(65) ಎಂಬ ರೈತ ಚಿಕಿತ್ಸೆ ಫಲಸದೆ ಗುರುವಾರ ಬೆಳಗಿನಜಾವ ಆಸ್ಪತ್ರೆಯಲ್ಲಿ ಮೃತಪಟ್ಟಿದ್ಧಾನೆಂದು ಕುಟುಂಬದ ಮೂಲಗಳು ತಿಳಿಸಿವೆ.

ಕಳೆದ ಜುಲೈ 29ರ ಸೋಮವಾರ ಮಧ್ಯಾಹ್ನ ಈ ಘಟನೆ ನಡೆದಿದ್ದು ಕರಡಿ ದಾಳಿ ಸಂದರ್ಭದಲ್ಲಿ ಕರಡಿಯೊಂದಿಗೆ ಸಾಕಷ್ಟು ಹೋರಾಟ ನಡೆಸಿದ್ದ ಓಂಕಾರಪ್ಪ ಅಲ್ಲಿಗೆ ಬಂದ ಕೆಲ ಗ್ರಾಮಸ್ಥರ ನೆರವಿನಿಂದ ಕರಡಿ ಓಡಿಹೋಗಿತ್ತು. ಸುದ್ದು ತಿಳಿದ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಅಂದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಗಾಯಾಳು ಓಂಕಾರಪ್ಪನ ಚಿಕಿತ್ಸೆ ವೆಚ್ಚವನ್ನು ಇಲಾಖೆ ಬರಿಸುವುದಾಗಿ ಹಿರಿಯೂರು ವಲಯ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್ ತಿಳಿಸಿದ್ದರು.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್, ಗಾಯಾಳಿಗೆ 5 ಲಕ್ಷ ಪರಿಹಾರ ನೀಡುವ ವ್ಯವಸ್ಥೆ ಇದ್ದು, ಮೃತಪಟ್ಟರೆ 15 ಲಕ್ಷ ಹಣವನ್ನು ಅವರ ಕುಟುಂಬ ವರ್ಗಕ್ಕೆ ನೀಡಲಾಗುವುದು. ಅಲ್ಲದೆ ಸುಮಾರು ನಾಲ್ಕು ವರ್ಷಗಳ ಕಾಲ ಮಾಹೆಯಾನ 4 ಸಾವಿರದಂತೆ ಅವರ ವಾರಸುದಾರರಿಗೆ ನೀಡಲಾಗುವುದು. ಈ ಘಟನೆ ನಂತರ ಆ ಭಾಗದಲ್ಲಿ ಮತ್ತೆ ಎಲ್ಲೂ ಕರಡಿ ಕಾಣಿಸಿಕೊಂಡಿಲ್ಲವೆಂದು ತಿಳಿಸಿದ್ದಾರೆ. ಮೃತ ಓಂಕಾರಪ್ಪನ ಕುಟುಂಬಕ್ಕೆ ಶೀಘ್ರದಲ್ಲೇ ಸರ್ಕಾರ ಪರಿಹಾರ ಹಣ 15 ಲಕ್ಷ ರೂಗಳನ್ನು ನೀಡಲಾಗುವುದು ಎಂದರು. ಜಿಲ್ಲಾ ಉಪ ಸಂರಕ್ಷಣಾಧಿಕಾರಿ ಟಿ.ರಾಜಣ್ಣ, ವಲಯ ಅರಣ್ಯಾಧಿಕಾರಿ ಎಸ್.ವಿ.ಮಂಜುನಾಥ್, ರಾಜೇಶ್, ವಿ.ವಸಂತಕುಮಾರ್ ಭೇಟಿ ನೀಡಿದ್ದರು.



ಚಳ್ಳಕೆರೆ ತಾಲ್ಲೂಕಿನ ಹೊಸಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 78ನೇ ಸ್ವಾತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ವಿವಿಧ ಸ್ವಾತಂತ್ರ್ಯ ಹೋರಾಟಗಾರರ ವೇಷದಲ್ಲಿ ಕಾಣಿಸಿಕೊಂಡರು.

ಪ್ರಮುಖ ಸುದ್ದಿ

# ಸ್ವಾರ್ಥ ಬದಿಗಿಟ್ಟು ದೇಶದ ಕಲ್ಯಾಣಕ್ಕೆ ಶ್ರಮಿಸಿ: ಚಂದ್ರಪ್ಪ

» ಹೊಳಲ್ಕೆರೆ

ದೇಶದ ಸ್ವಾತಂತ್ರ್ಯಕ್ಕಾಗಿ ಹಲವರ ತ್ಯಾಗ, ಬಲಿದಾನ ಪರಿಣಾಮ ನಾವೆಲ್ಲರೂ ಸ್ವಾತಂತ್ರ್ಯದ ಸವಿಯನ್ನು ಅನುಭವಿಸುತ್ತಿದ್ದೇವೆ. ಸ್ವಾರ್ಥ ಬದಿಗಿಟ್ಟು ದೇಶದ ಕಲ್ಯಾಣಕ್ಕೆ ಶ್ರಮಿಸಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಅವರು ಪಟ್ಟಣದ ಕೊಟ್ರೇನಂಜಪ್ಪ ಕಾಲೇಜು ಆವರಣದಲ್ಲಿ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡ ಸ್ವಾತಂತ್ರ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚನ್ನಾಗಿ ಕೆಲಸ ಮಾಡಿದಂತೆ ಕೆಂದ್ರದಲ್ಲಿ ನರೇಂದ್ರ ಮೋದಿ ಪ್ರಧಾನಿಯಾಗಿ ದೇಶದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಕೈಗೊಂಡು, ವಿಶ್ವಮಟ್ಟದಲ್ಲಿ ಭಾರತ ದೇಶವನ್ನು ಬೆಳಗಿಸುತ್ತಿದ್ದಾರೆ. ನಿಸ್ವಾರ್ಥ ಸೇವೆಯಿಂದ ದೇಶವನ್ನು ಕಟ್ಟುವ ಕೆಲಸ ಆಗಬೇಕು. ಅಧಿಕಾರ ಶಾಶ್ವತವಲ್ಲ. ನಮ್ಮ ಅವಧಿಯಲ್ಲಿ ಮಾಡಿದ ಕೆಲಸ ಶಾಶ್ವತ. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಕೈಗೊಂಡು ಎಲ್ಲಾ ರೀತಿಯ ಸೌಲಭ್ಯಗಳು ಜನರಿಗೆ ತಲುಪುವಂತೆ ಮಾಡಲಾಗಿದೆ ಎಂದರು.



ತಹಸೀಲ್ದಾರ್ ಬೀಬಿ ಫಾತೀಮ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ಭಾರತ ಅಭಿವೃದ್ಧಿ ಕಡೆ ಸಾಗುತ್ತಿದೆ. ಜಾತ್ಯಾತೀತ ಚಿಂತನೆ ಜತೆ ದೇಶವನ್ನು ಕಟ್ಟಲು ಪ್ರತಿಯೊಬ್ಬರು ಶ್ರಮಿಸಬೇಕೆಂದರು.

ಪುರಸಭೆ ಸದಸ್ಯರಾದ ಬಿ.ಎಸ್. ರುದ್ರಪ್ಪ. ಪಿ.ಎಚ್.ಮುರುಗೇಶ್, ಆರ್.ಎ.ಅಶೋಕ್, ಸುಧಬಸವರಾಜ್, ವಸಂತರಾಜ್, ಪಿ.ಆರ್.ಮಲ್ಲಿಕಾರ್ಜುನ್, ಕೆಡಿಪಿ ಸದಸ್ಯರಾದ ಪಾಡಿಗಟ್ಟೆ ಸುರೇಶ್, ತಾಳಿಕಟ್ಟೆ ಬಿ.ಗಂಗಾಧರ್, ಕಿರಣ್, ಗ್ಯಾರಂಟಿ ಸದಸ್ಯರಾದ ಸುನಿಲ್ ಕುಮಾರ್ ನಾಯ್ಕ. ಪುರುಷೋತ್ತಮ, ದೇವೇಂದ್ರಪ್ಪ ಗಂಗಸಮುದ್ರ, ಅಬ್ದುಲ್ ಕಲಂ, ಸರಕಾರಿ ನೌಕರರ ಸಂಘದ ಅಧ್ಯಕ್ಷ ಲೋಕೇಶ್, ಬಿಇಒ ಶ್ರೀನಿವಾಸ್, ಸಹಾಯಕ ನಿರ್ದೇಶಕ ಹನುಮಂತರಾಯ್, ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಸುರೇಂದ್ರನಾಥ್, ಕರವೆ ಅಧ್ಯಕ್ಷ ಹನುಮಂತಪ್ಪ, ಕೆ.ಬಿ.ಬಸವರಾಜಯ್ಯ, ವಕೀಲ ಎಸ್. ವೇದಮೂರ್ತಿ, ಎ.ಚಿತ್ತಪ್ಪ, ಮುಖ್ಯಾಧಿಕಾರಿ ರಾಧ, ಸಿಪಿಐ ಚಿಕ್ಕಣ್ಣ, ಇಒ ರವಿ ವಿವಿಧ ಇಲಾಖೆ ಮುಖ್ಯಸ್ಥರು, ವಿದ್ಯಾರ್ಥಿಗಳು, ಶಿಕ್ಷಕರು ಸಾರ್ವಜನಿಕರು, ಮತ್ತೀತರರು ಇದ್ದರು.

ಡಾ.ಹೆಚ್.ಜಿ.ಉಮಾಪತಿ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಗಿತ್ತು. ವಿವಿಧ ಶಾಲೆ ವಿದ್ಯಾರ್ಥಿಗಳಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲಾಗಿತ್ತು.

9.45ಗಂಟೆಗೆ ಧ್ವಜಾರೋಹಣ ನಡೆದ ಹಿನ್ನೆಲೆಯಲ್ಲಿ ಬಿಸಿಲಿನ ಶಾಖಕ್ಕೆ ಹಲವಾರು ವಿದ್ಯಾರ್ಥಿಗಳು ಅಲ್ಲಲ್ಲಿ ತಲೆ ತಿರುಗಿ ಬಿದ್ದರು. ತಹಸೀಲ್ದಾರ್ ಬೀಬಿ ಫಾತೀಮ ಭಾಷಣ ಮಾಡುತ್ತಿರುವಾಗ ಬಿಸಲಿನ ತಾಪಕ್ಕೆ ಮೈಕ್ ಮುಂದೆ ಕುಸಿದು ಬಿದ್ದರು. ವಿಳಂಭವಾಗಿ ಕಾರ್ಯಕ್ರಮಕೈಗೊಂಡಿದ್ದನ್ನುಪೋಷಕರು, ಸಾರ್ವಜನಿಕರು ತಾಲೂಕು ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

## ಫಾಸ್ಟ್ ನ್ಯೂಸ್

### ಪರಶುರಾಂಪುರ ರೈತ ಸಂಪರ್ಕ ಕೇಂದ್ರದಲ್ಲಿ ಸ್ವಾತಂತ್ರ್ಯ ದಿನಾಚರಣೆ



» **ಪರಶುರಾಂಪುರ**

ದೇಶದ ಅಸಂಖ್ಯಾತ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಹಾಗೂ ಬಲಿದಾನಗಳಿಂದ ಲಭಿಸಿದ ನಮ್ಮ ಸ್ವಾತಂತ್ರ್ಯ ಅರ್ಥಪೂರ್ಣವಾಗಬೇಕಾದರೆ ದೇಶದ ಪ್ರತಿಯೊಬ್ಬರು ದೇಶವನ್ನು ಕಟ್ಟಲು ಶ್ರಮಿಸಬೇಕಾಗಿದೆ ಎಂದು ಕೃಷಿ ಅಧಿಕಾರಿ ಜೀವನ್ ತಿಳಿಸಿದರು. ಗ್ರಾಮದ ರೈತ ಸಂಪರ್ಕ ಕೇಂದ್ರದಲ್ಲಿ ಗುರುವಾರ 78ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ದೇಶ ವಿಶ್ವದಲ್ಲಿಯೇ ಒಂದು ಬಲಿಷ್ಠ ರಾಷ್ಟ್ರವಾಗಿ ಹೊರಹೊಮ್ಮಿದ್ದು,ನಮ್ಮ ಹಿರಿಯರ ಪ್ರಾಣಾರ್ಪಣೆಯಿಂದ ಸ್ವಾತಂತ್ರ್ಯವನ್ನು ಪಡೆಯಲಾಗಿದೆ. ದೇಶದ ಪ್ರತಿಯೊಬ್ಬ ನಾಗರಿಕರು ನಮ್ಮ ಹಿರಿಯರ ತ್ಯಾಗ, ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು. ಸಂದರ್ಭದಲ್ಲಿ ಕೃಷಿ ಕ್ಷೇತ್ರದಲ್ಲಿ ಸಾಧನೆ ಮಾಡಿದ ಪ್ರಗತಿಪರ ರೈತರನ್ನ ಗೌರವಿಸಲಾಯಿತು.ಈ ವೇಳೆಯಲ್ಲಿ ಕೃಷಿ ಅಧಿಕಾರಿಯಾದ ಜೀವನ್,ತಾಂತ್ರಿಕ ಸಹಾಯಕ ಸಾಮ್ಯ ನಾಯ್ಕ್,ಕೃಷಿಕ ಸಮಾಜದ ನಾಗೇಂದ್ರಪ್ಪ, ಪ್ರಗತಿಪರ ರೈತ ರುದ್ರಮುನಿಯಪ್ಪ, ರೈತ ಸಂಘದ ಮುಖಂಡರಾದ ಜಂಪಣ್ಣ, ಭಾಷಾ, ನವೀನ್ ಗೌಡ, ಪ್ರಕಾಶ್, ಅಣ್ಣಪ್ಪ, ಹನುಮಂತಪ್ಪ,ಸೂರಜ್ ,ಕೃಷಿ ಸಾಕಿಯರು, ಅನುವುಗಾರರು ಸೇರಿದಂತೆ ಇನ್ನಿತರಿದ್ದರು.

### ದೋಡ್ಡಚೆಲ್ಲೂರಲ್ಲಿ ಸ್ವಾತಂತ್ರ್ಯ ದಿನಾಚರಣೆ



» **ಪರಶುರಾಂಪುರ**

ಸಮೀಪದ ದೊಡ್ಡಚೆಲ್ಲೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಗುರುವಾರ 78ನೇ ಸ್ವಾತಂತ್ರ್ಯ ದಿನಾಚರಣೆಯು ಸಂಭ್ರಮ ಸಡಗರದಿಂದ ಆಚರಿಸಲಾಯಿತು. ಧ್ವಜಾರೋಹಣ ಕಾರ್ಯಕ್ರಮದ ಬಳಿಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರರ ಭಾವಚಿತ್ರಗಳ ಮೂಲಕ ಪಥ ಸಂಚಲನ ನಡೆಸಿದರು.ಊರಿನ ಗ್ರಾಮಸ್ಥರು ವಿದ್ಯಾರ್ಥಿಗಳ ಜೊತೆ ಹೆಜ್ಜೆ ಹಾಕುತ್ತಾ ಘೋಷಣೆಗಳಿಗೆ ಧ್ವನಿ ಗೂಡಿಸುತ್ತಾ ಪಥ ಸಂಚಲನದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಎಲ್ಲರ ಸಹಕಾರದೊಂದಿಗೆ ವಿದ್ಯಾರ್ಥಿಗಳಿಗೆ ಸಿಹಿಯೂಟದೋಂದಿಗೆ ಡಿಜೆ ಶಬ್ದದಲ್ಲಿ ಕನ್ನಡ ನಾಡು ನುಡಿ,ದೇಶ ಭಕ್ತಿ ಗೀತೆಗಳ ಜತೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳ ನೃತ್ಯಗಳು ಆಕಷಈಣೆಗೋಂಡವು.ಪುಟಾಣಿ ಮಕ್ಕಳು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟಗಾರರ ವೇಷಭೂಷಣಷ ಕಂಡು ಎಲ್ಲರೂ ಮೋಬೈಲ್ನಲ್ಲಿ ಸೆಲ್ಫಿ ಜತೆ ಪೋಟೋ ಕ್ಲಿಕ್ಕಿಸಿದ್ದು ವಿಶೇಷವಾಗಿತ್ತು.ಹಬ್ಬದ ವಾತಾವರಣದಲ್ಲಿ ಶಾಲಾ ಆವರಣದಲ್ಲಿ ಸೇರಿದ್ದು ಜನ ಕಂಡು ದಾರಿ ಹೋಕರು ಸಹಾ ಒಂದು ಕ್ಷಣ ನಿಂತು ವಿಚಾರಿಸಿ ಹೋಗುವ ರೀತಿಯಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮವಾಗಿ ಆಚರಿಸಲಾಯಿತು.ವೇದಿಕೆಯಲ್ಲಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ರಾಘವೇಂದ್ರ ಎ, ಉಪಾಧ್ಯಕ್ಷ ದ್ರಾಕ್ಷಯಣಮ್ಮ,ಗ್ರಾಪಂ ಸದಸ್ಯರಾದ ಪ್ರಸನ್ನಕುಮಾರ್,ಜಯಮ್ಮಹನುಮಂತರಾಯ,ಶೃತಿ ಶಿವಣ್ಣ,ಸವಿತಾ ಶಿವಣ್ಣ,ಶಿವಪ್ಪ ರತ್ನಮ್ಮ ತಿಮ್ಮಣ್ಣ,ರಾಘವೇಂದ್ರ,ಎಸ್ಡಿಎಂಸಿ ಮಾಜಿ ಅಧ್ಯಕ್ಷ ನಾಗರಾಜ, ಎಸ್ಡಿಎಂಸಿ ಸದಸ್ಯರಾದ ಕುಂಟರಾಜ ,ಪುಟ್ಟಣ್ಣ,ನಾಗರಾಜ,ಲಿಂಗಣ್ಣ,ರಾಜಣ್ಣ,ಹನುಮಂತ ರಾಯ, ಮುಖ್ಯ ಶಿಕ್ಷಕ ಡಿ.ಟಿ ಹನುಮಂತರಾಯ, ಶಿಕ್ಷಕರಾದ ವಿಶಾಲಾಕ್ಷಿ,ರಾಧಮ್ಮ, ಸೌಂದರ್ಯ, ಸೌಮ್ಯ, ಕೀರ್ತನ ಫ್ಯಾಬ್ರಿಕೇಶನ್ ಪಿ.ಹನುಮಂತರಾಯ ಹಾಗೂ ಗ್ರಾಮದ ಹಿರಿಯರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



**ಪರಶುರಾಂಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕಿಯರ ಶಾಲಾ ಆವರಣದಲ್ಲಿ ಗುರುವಾರ ಆಯೋಜಿಸಿದ್ದ 78ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣವನ್ನ ಗ್ರಾಪಂ ಅಧ್ಯಕ್ಷ ಜಗಲೂರುಸ್ವಾಮಿ ನೆರವೇರಿಸಿದರು.**

## ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ 78ನೇ ಸ್ವಾತಂತ್ರ್ಯೋತ್ಸವ ರಾಷ್ಟ್ರಧ್ವಜಾರೋಹಣ

# ಕೊಟ್ಟ ಮಾತಿನಂತೆ ಗ್ಯಾರಂಟಿ ಅನುಷ್ಟಾನ

### ದಾವಣಗೆರೆ ಜಿಲ್ಲೆಯಲ್ಲಿನ ಕೆರೆಗಳ ಭರ್ತಿಗೆ ಮಾಸ್ಟರ್ ಪ್ಲಾನ್; ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್

» **ದಾವಣಗೆರೆ**

ಸರ್ಕಾರ ರಾಜ್ಯದ ಜನತೆಗೆ ನೀಡಿದ್ದ ಭರವಸೆಗಳನ್ನು ಈಡೇರಿಸುವಲ್ಲಿ ಯಶಸ್ವಿಯಾಗಿದ್ದು, ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳೊಂದಿಗೆ ಜನಸಾಮಾನ್ಯರಿಗಾಗಿ ಅನೇಕ ಯೋಜನೆ, ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಟಾನ ಮಾಡಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಹೇಳಿದರು.

ಅವರು (ಆ.15) ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾದ 78 ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ವಿವಿಧ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿ ತಮ್ಮ ಸ್ವಾತಂತ್ರ್ಯೋತ್ಸವ ಸಂದೇಶದಲ್ಲಿ ಮಾತನಾಡಿದರು. ಬ್ರಿಟೀಷರ ದಾಸ್ಯದಲ್ಲಿದ್ದ ಭಾರತ ದೇಶ ಸ್ವಾತಂತ್ರ್ಯ ಹೊಂದಿದ್ದು ಇದಕ್ಕಾಗಿ ಅನೇಕ ಹಿರಿಯರು ತ್ಯಾಗ, ಬಲಿದಾನ ಮಾಡಿದ್ದಾರೆ, ಅವರೆಲ್ಲರನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ ಎಂದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಜನತೆಗೆ ತಲುಪಿಸುವಲ್ಲಿ ರಾಜ್ಯ ಸರ್ಕಾರ ಯಶಸ್ವಿಯಾಗಿದ್ದು ಇದಕ್ಕಾಗಿ ಸಾವಿರಾರು ಕೋಟಿ ವೆಚ್ಚ ಮಾಡಿದೆ. ದಾವಣಗೆರೆ ಜಿಲ್ಲೆಗೆ ಶಕ್ತಿ ಯೋಜನೆಗಾಗಿ ಇಲ್ಲಿಯವರೆಗೆ 662 ಕೋಟಿ, ಅನ್ನಭಾಗ್ಯದಡಿ 10 ಕೆಜಿ ಅಕ್ಕಿಯಲ್ಲಿ 5 ಕೆಜಿ ನಗದು ಪಾವತಿಸುತ್ತಿದ್ದು ಇದಕ್ಕಾಗಿ ಪ್ರತಿ ತಿಂಗಳು 3.41 ಲಕ್ಷ ಜಿಲ್ಲೆಯ ಕಾರ್ಡ್‌ದಾರರಿಗೆ ಪ್ರತಿ ತಿಂಗಳು 19.66 ಕೋಟಿ ಪಾವತಿಸುತ್ತಿದ್ದು ಇಲ್ಲಿವರೆಗೆ 228 ಕೋಟಿ ಪಾವತಿಸಿದೆ. ಗೃಹ ಜ್ಯೋತಿಯಡಿ 4.27 ಲಕ್ಷ ಗ್ರಾಹಕರ ವಿದ್ಯುತ್ ಬಿಲ್ ಪಾವತಿಗಾಗಿ 282 ಕೋಟಿ ನೀಡಲಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ 3.55 ಲಕ್ಷ ಯಜಮಾನಿಯರಿಗೆ ಜೂನ್‌ವರೆಗೆ 662 ಕೋಟಿ ಪಾವತಿಸಲಾಗಿದೆ. ಯುವನಿಧಿಯಡಿ 9035 ಪದವಿ ಹಾಗೂ ಡಿಪ್ಲೊಮಾದಾರರಿಗೆ ನಿರುದ್ಯೋಗ ಭತ್ಯೆಯಾಗಿ 2.70 ಕೋಟಿ ನೀಡಲಾಗಿದ್ದು ಇದು ದಾವಣಗೆರೆ ಜಿಲ್ಲೆಯ ಪ್ರಗತಿಯಾಗಿದೆ. ಆದರೆ ಈ ಯೋಜನೆಗಳನ್ನು ಪರಿಷ್ಕರಿಸಲಾಗುತ್ತಿದೆ ಎಂಬ ಗುಮಾನಿಗಳಿದ್ದು ಯಾವುದೇ ಪರಿಷ್ಕರಣೆ ಸರ್ಕಾರದ ಮುಂದಿಲ್ಲ, ಯೋಜನೆಗಳು ಸಫಲವಾಗಿ ಅನುಷ್ಟಾನವಾಗುತ್ತಿವೆ ಎಂದರು.



ಪ್ರಸಕ್ತ ಮುಂಗಾರು ಆಶಾದಾಯಕ ವಾಗಿದ್ದು ಕಳೆದ ವರ್ಷಕ್ಕಿಂತ ಈ ವರ್ಷ ಅಧಿಕ ಮಳೆಯಾಗಿದೆ. ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರದ ಕೊರತೆಯಾಗದಂತೆ ನೋಡಿಕೊಳ್ಳಲಾಗಿದೆ. ಜಿಲ್ಲೆಯ ಜೀವನಾಡಿಯಾದ ಭದ್ರಾ ಜಲಾಶಯ ಭರ್ತಿಯಾಗಿದ್ದು ಕೃಷಿ ಚಟುವಟಿಕೆಗಳು ಗರಿಗೆದರಿದ್ದು ಇದರಿಂದ ಜಿಲ್ಲೆಯ ರೈತರ ಆರ್ಥಿಕ ಸ್ಥಿತಿಗತಿ ಈ ವರ್ಷ ಉತ್ತಮವಾಗಲಿದೆ ಎಂದರು.

ತುಂಗಾಭದ್ರಾ ನದಿ ಮೂಲದಿಂದ ಹರಿಹರ ತಾಲ್ಲೂಕು ದೀಟೂರು ಬಳಿಯಿಂದ ಏತ ನೀರಾವರಿ ಮೂಲಕ ಜಗಳೂರು ತಾಲ್ಲೂಕಿನ 51 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಲ್ಲಿ 31 ಕೆರೆಗಳಿಗೆ ನೀರು ಹರಿಸಿಸಲಾಗುತ್ತಿದೆ. ಬಾಕಿ ಉಳಿದ ಕೆರೆಗಳಿಗೂ ನೀರು ಹರಿಸಲು ಕಾಮಗಾರಿ ಮುಂದುವರೆದಿದೆ. ಹೊನ್ನಾಳಿ ತಾಲ್ಲೂಕಿನ 23 ಹಾಗೂ ಹರಿಹರ ತಾಲ್ಲೂಕಿನ ಒಂದು ಕೆರೆಗೆ ನೀರು ತುಂಬಿಸಲು ರೂ. 52 ಕೋಟಿ ವೆಚ್ಚದ ಯೋಜನೆ , ಹೊನ್ನಾಳಿ ಹಾಗೂ ನ್ಯಾಮತಿ ತಾಲ್ಲೂಕಿನ 26 ಕೆರೆಗಳಿಗೆ ನೀರು ತುಂಬಿಸಲು ರೂ. 100 ಕೋಟಿ ವೆಚ್ಚದ ಯೋಜನೆ, ಸಾಸ್ವೆಹಳ್ಳಿ ಏತನೀರಾವರಿ ಯೋಜನೆ ಮೂಲಕ ಚನ್ನಗಿರಿ, ಹೊನ್ನಾಳಿ ಹಾಗೂ ದಾವಣಗೆರೆ ತಾಲ್ಲೂಕುಗಳಲ್ಲಿನ ಒಟ್ಟು 96 ಗ್ರಾಮಗಳ 102 ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ಈ ಕಾಮಗಾರಿ ಬಹುತೇಕ ಮುಕ್ತಾಯದ ಹಂತಕ್ಕೆ ತಲುಪಿದ್ದು, ಕೆಲವೇ ದಿನಗಳಲ್ಲಿ ಚಾಲನೆಗೊಳ್ಳಲಿದೆ ಎಂದರು.

**ಎಲ್ಲಾ ಕೆರೆ ತುಂಬಿಸಲು ಮಾಸ್ಟರ್ ಪ್ಲಾನ್;** ಮಳೆಗಾಲದಲ್ಲಿ ಜಿಲ್ಲೆಯಲ್ಲಿನ ಎಲ್ಲಾ ಕೆರೆಗಳನ್ನು ಭರ್ತಿ ಮಾಡುವ ಮೂಲಕ ಅಂತರ್ಜಲ ಮಟ್ಟ ಹೆಚ್ಚಳದ ಜೊತೆಗೆ ರೈತರ ಕೃಷಿಚಟುವಟಿಕೆಗಳಿಗೆ ಸಾಕಷ್ಟು ಲಾಭವಾಗಲಿರುವುದರಿಂದ ಮಾದರಿ ಯೋಜನೆಯಾಗಿ ಪರಿಗಣಿಸಲು ಯೋಜನೆ ತಯಾರಿಸಲು ಉದ್ದೇಶಿಸಲಾಗಿದೆ ಎಂದರು.

ಜಿಲ್ಲೆಯ ಗ್ರಾಮೀಣಾಭಿವೃದ್ದಿ ಒತ್ತು ನೀಡಿದ್ದು ಖಾತರಿಯಡಿ 13.32 ಮಾನವ ದಿನ ಸೃಜಿಸಿ 46.220 ಕುಟುಂಬಗಳಿಗೆ ಕೆಲಸ ನೀಡಿ 44.85 ಕೋಟಿ ನೀಡಲಾಗಿದೆ. ಮತ್ತು ಕಾಲುವೆಗಳಲ್ಲಿನ ಹೂಳು ತೆಗೆಯುವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ನಗರ ಮತ್ತು ಪಟ್ಟಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆಯಡಿ 200 ಕೋಟಿ ಮತ್ತು ನಗರೋತ್ಥಾನ 4 ರಲ್ಲಿ 59.50 ಕೋಟಿ ವೆಚ್ಚದ ಕಾಮಗಾರಿಗಳನ್ನು ಕೈಗೊಂಡು ವಿವಿಧ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲಾಗಿದೆ.

ದಾವಣಗೆರೆ ಜಿಲ್ಲೆಯು ತೋಟಗಾರಿಕೆ ಯಲ್ಲಿ ಮುಂಚೂಣಿಯಲ್ಲಿದ್ದು, ಒಂದು ಲಕ್ಷ ಹೆಕ್ಟೇರ್ ಗಿಂತ ಹೆಚ್ಚು ಪ್ರದೇಶದಲ್ಲಿ ವಿವಿಧ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಸಮಗ್ರ ತೋಟಗಾರಿಕಾ ಅಭಿವೃದ್ಧಿ ಯೋಜನೆಯಡಿ ರೂ. 5 ಕೋಟಿ ಅನುದಾನದಲ್ಲಿ ನಗರದಲ್ಲಿ 10 ಉದ್ಯಾನವನಗಳನ್ನು ನಿರ್ಮಿಸಲು ಯೋಜಿಸಿದೆ. ಮತ್ತು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಉಪ ಖನಿಜ ರಿಯಾಯಿತಿ ನಿಯಮಗಳನ್ನು ಮತ್ತಷ್ಟು ಸರಳೀಕರಿಸಿ, ಸುಲಭವಾಗಿ ಜನರಿಗೆ ಮರಳು ಮತ್ತು ಎಂ–ಸ್ಯಾಂಡ್ ದೊರಕುವಂತೆ ಕ್ರಮವಹಿಸಲಾಗಿದೆ ಎಂದರು.

ಚಿಗಟೇರಿ ಜಿಲ್ಲಾ ಆಸ್ಪತ್ರೆಯ ದುರಸ್ಥಿ ಮತ್ತು ಮೂಲ ಸೌಕರ್ಯ ಅಭಿವೃದ್ಧಿಗೆ ಹಾಗೂ ಹಂತ ಹಂತವಾಗಿ ಹೊಸ ಬ್ಲಾಕ್‌ಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೆ ಆರೋಗ್ಯ ಸಚಿವರ ಜೊತೆ ಚರ್ಚಿಸಿದ್ದು ಮುಂದಿನ ದಿನಗಳಲ್ಲಿ ಇದು ಸಾಕಾರವಾಗಲಿದೆ. ಪ್ರಸ್ತುತ ಡೆಂಗ್ಯೂ ಜ್ವರ ಹೆಚ್ಚುತ್ತಿರುವುದರಿಂದ ಜಿಲ್ಲಾ ಮಟ್ಟದಲ್ಲಿ ಡೆಂಗ್ಯೂ ವಾರ್ ರೂಂ ತೆರೆದು ಡೆಂಗ್ಯೂ ಜ್ವರ ಹರಡದಂತೆ ಮುಂಜಾಗೃತೆ ವಹಿಸಲಾಗಿದೆ ಎಂದರು.

ಈ ವರ್ಷ ಸಮಾಜ ಕಲ್ಯಾಣ ಇಲಾಖೆಯಿಂದ 2 ಕಾಲೇಜು ಹಾಸ್ಟೆಲ್ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 8 ಕಾಲೇಜು ಹಾಸ್ಟೆಲ್‌ಗಳು ಹೊಸದಾಗಿ ಮಂಜೂರಾಗಿದ್ದು ಕಟ್ಟಡ ನಿರ್ಮಾಣಕ್ಕೆ ನಿವೇಶನ ನೀಡಿ ಕಟ್ಟಡ ನಿರ್ಮಾಣಕ್ಕೂ ಅನುದಾನ ನೀಡಲಾಗಿದೆ ಎಂದರು.

**ಆಕರ್ಷಕ ಪಥ ಸಂಚಲನ :** ಶಿಸ್ತಿನ ಮತ್ತು ಆಕರ್ಷಕ ಪಥ ಸಂಚಲನದಲ್ಲಿ ಒಟ್ಟು 31 ತಂಡಗಳು ಪಾಲ್ಗೊಂಡಿದ್ದವು, ಮಹೇಶ್ ಪಾಟೀಲ್ ಆರ್.ಎಸ್.ಐ. ನೇತೃತ್ವದ ಡಿಎಆರ್ ತಂಡ, ನಗರ ಉಪವಿಭಾಗ ಪೊಲೀಸ್ ಸಚೀನ್ ಬಿರಾದಾರ್ ತಂಡ, ಗ್ರಾಮಾಂತರ ಉಪವಿಭಾಗ ಪೊಲೀಸ್ ಶ್ರೀಪತಿ ಗಿನ್ನಿ ತಂಡ, ಗೃಹರಕ್ಷಕ ದಳದಿಂದ ಹಾಲೇಶ್, ಅಗ್ನಿಶಾಮಕದಳ ಪರುಶುರಾಮಪ್ಪ, ಡಿ.ಆರ್.ಎಂ. ಕಾಲೇಜ್‌ನಿಂದ ಶರನಿಲ್ ಡಿ.ಕೆ., ಎಆರ್‌ಜಿ ಕಾಲೇಜ್‌ನಿಂದ ಚಿನ್ಮಯ ಎಂ.ಎ, ಜಿ.ಎಫ್..ಜಿ.ಸಿ ಕಾಲೇಜ್‌ನಿಂದ ಗಗನ್ ದೀಪ್, ಜಿ.ಎಂ.ಐ.ಟಿ ಕಾಲೇಜಿನಿಂದ ಶಶಾಂಕ್, ಎ.ವಿ.ಕೆ ಕಾಲೇಜಿನಿಂದ ವೀಣಾ, ಡಿ.ಆರ್.ಆರ್ ಕಾಲೇಜ್‌ನಿಂದ ಮೊಹಮ್ಮದ್ ರಿಹಾನ್, ಸೆಂಟ್ ಫಾಲ್ಸ್ ಸ್ಕೂಲ್‌ನಿಂದ ಗೌತಮಿ , ಪಿ.ಎಸ್.ಎಸ್.ಇ.ಎಂ.ಆರ್ ತೋಳಹುಣಸೆ ಶ್ರವಣ್ ಬಿ.ಎನ್, ಪೊಲೀಸ್ ಪಬ್ಲಿಕ್ ರೆಸಿಡೆನ್ಶಿಯಲ್ ಸ್ಕೂಲ್‌ನಿಂದ ಸುಜಯ್ ಎಸ್.ಗೌಡ, ಸಿದ್ದೇಶ್ವರ ಸ್ಕೂಲ್ ಆನಗೋಡು ಸಿದ್ದೇಶ್, ಸಿದ್ದಗಂಗಾ ಪಿಯು ಕಾಲೇಜಿನಿಂದ ಮುರಾರಿ ಜಿ.ಆರ್, ಬಾಪೂಜಿ ಹೈಸ್ಕೂಲ್‌ನಿಂದ ಸನಿಕಾ, ಸಿದ್ದಗಂಗಾ ಸ್ಕೂಲ್‌ನಿಂದ ಸಿದ್ದೇಶ್, ಸಿದ್ದಗಂಗಾ ಸ್ಕೂಲ್ ಎಸ್.ಪಿ.ಸಿ ಗರ್ಲ್ಸ್ ಟ್ರೂಪ್‌ನಿಂದ ರೋಷಣಿ, ಸೇಂಟ್ ಫಾಲ್ಸ್ ಸೆಂಟ್ರಲ್ ಸ್ಕೂಲ್ ಗರ್ಲ್ ಟ್ರೂಪ್‌ನಿಂದ ಶ್ರೀಲೇಖ, ಭಾರತ ಸ್ಕೌಟ್ ಅಂಡ್ ಗೈಡ್ಸ್ ಡಿಸ್ಟ್ರಿಕ್ಟ್ ಟ್ರೂಪ್‌ನಿಂದ ಮಾನಸ ಡಿ, ಎಕ್ಸ್ ಮುನ್ಸಿಪಾಲ್ ಬಾಯ್ ಹೈಸ್ಕೂಲ್‌ನಿಂದ ಜುನೆದ್ ಅಹಮದ್ , ಜೈನ್ ಪಬ್ಲಿಕ್ ಸ್ಕೂಲ್‌ನಿಂದ ಪೃಥ್ವಿ ಎಸ್.ಬಿ , ಸರ್ಟಿಫೈಡ್ ಸ್ಕೂಲ್‌ನಿಂದ ಪುನೀತ್, ಮೌನೇಶ್ವರ ಡಪ್ ಅಂಡ್ ಡಂಬ್ ಸ್ಕೂಲ್‌ನಿಂದ ತಿಪ್ಪೇಸ್ವಾಮಿ, ಗಾರ್ಮೆಂಟ್ ಬಾಯ್ಸ್ ಸ್ಕೂಲ್‌ನಿಂದ ಓಂಕಾರ್, ಪುಷ್ಪ ಮಹಾಲಿಂಗಪ್ಪ ಸ್ಕೂಲ್‌ನಿಂದ ನಿರಂತರ , ಸೇಂಟ್ ಜಾನ್ಸ್ ಇಂಗ್ಲೀಷ್ ಮೀಡಿಯಂ ಹೈಸ್ಕೂಲ್‌ನಿಂದ ಗೀತಾಂಜಲಿ, ರಾಷ್ಟ್ರೋತ್ಥನ ವಿದ್ಯಾ ಕೇಂದ್ರ ಹೈಸ್ಕೂಲ್‌ನಿಂದ ತನ್ಮಯ, ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಬ್ಯಾಂಡ್ ಮಿಥುನ ಬಿದರಿ ತಂಡ ಪಥ ಸಂಚಲನದಲ್ಲಿ ಭಾಗವಹಿಸಿ ಅತ್ಯುತ್ತಮವಾದ ಪ್ರದರ್ಶನ ನೀಡಿದವು. ಜಿಲ್ಲಾ ಪೊಲೀಸ್ ವಾದ್ಯ ವೃಂದ ಬ್ಯಾಂಡ್ ಮಾಸ್ಟರ್ ಪುರಂದರ ನಾಯ್ಕ ತಂಡದಿಂದ ರಾಷ್ಟ್ರಗೀತೆ ಸಹಿತ ವಾದ್ಯವನ್ನು ಪ್ರಸ್ತುತಪಡಿಸಿದರು. ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್ ವಿದ್ಯಾರ್ಥಿನಿಲಯರು ನಾವು ಭಾರತೀಯರು ದೇಶಭಕ್ತಿ ಗೀತೆಗೆ ನೃತ್ಯ ರೂಪಕ ಪ್ರದರ್ಶನ ನೀಡಿದರು. ರಾಜನಹಳ್ಳಿ ಸೀತಮ್ಮ ಸರ್ಕಾರಿ ಪ್ರೌಢಶಾಲೆ, ಸೆಂಟ್ ಮೇರಿಸ್ ಹಿರಿಯ ಪ್ರಾಥಮಿಕ ಹಾಗೂ ಪದವಿ ಪೂರ್ವ ಕಾಲೇಜು, ಜೈನ್ ವಿದ್ಯಾಲಯದಿಂದ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ಏರ್ಪಡಿಸಲಾಗಿತ್ತು. ದಾವಣಗೆರೆ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ದೂಡಾ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಮೇಯರ್ ವಿನಾಯಕ್ ಬಿ.ಹೆಚ್, ಪೊಲೀಸ್ ಮಹಾನಿರೀಕ್ಷಕರಾದ ಬಿ.ರಮೇಶ್, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಎಸ್ಪಿ ಉಮಾಪ್ರಶಾಂತ್, ಅಧಿಕಾರಿಗಳು ಉಪಸ್ಥಿತರಿದ್ದರು.



**ಚಿತ್ರಾಡಾನ್ ಬಾಸ್ಕೋ ಇವರ ಆಶ್ರಯ ಯೋಜನೆಯಲ್ಲಿ ನಡೆಯುತ್ತಿರುವ ಸಂಜೆ ಶಾಲೆಯನ್ನು ಇಂಗಳದಾಳ್ ಗ್ರಾಮದಲ್ಲಿ ಇತ್ತೀಚೆಗೆ ಉದ್ಘಾಟಿಸಲಾಯಿತು. ಈ ಸಂದರ್ಭದಲ್ಲಿ ಚಿತ್ರ ಸಿಬ್ಬಂದಿ ಮಹಂತೇಶ್, ಎಸ್‌ಡಿಎಮ್‌ಸಿ ಸದಸ್ಯ ಓ.ಮಂಜುನಾಥ್ ಅಂಗವಿಕಲ ಅಭಿವೃದ್ಧಿ ಕಾರ್ಯಕರ್ತ ಎಚ್.ಓಂಕಾರಪ್ಪ, ಮಂಜುಳ, ಲಕ್ಷ್ಮೀದೇವಿ, ಸುಶೀಲಮ್ಮ, ಶಿಕ್ಷಕಿ ಟಿ.ಕವಿತ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.**



**ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಚಿತ್ರದುರ್ಗ ಜಿಲ್ಲಾ ಆಮ್ ಆದ್ಮಿ ಪಾರ್ಟಿಯ ಕಚೇರಿ ಮುಂಭಾಗದಲ್ಲಿ ಧ್ವಜಾರೋಹಣ ನೆರವೇರಿಸಲಾಯಿತು. ಜಿಲ್ಲಾ ಅಧ್ಯಕ್ಷ ಇ.ಜಗದೀಶ್, ರಾಮಣ್ಣ, ಕುಬೇಂದ್ರ ನಾಯಕ್, ಜ್ಯೋತಿ, ಲಕ್ಷ್ಮಿ, ರವಿ, ಲೋಕಣ್ಣ, ರಾಜೇಶ್, ತನ್ವೀರ್, ರಾಜಣ್ಣ, ತಿಮ್ಮರೆಡ್ಡಿ, ಸೇರಿದಂತೆ ಪಕ್ಷದ ಅನೇಕ ಮುಖಂಡರು ಭಾಗವಹಿಸಿದ್ದರು**

## ಪ್ರಮುಖ ಸುದ್ದಿ

# ಮನುಷ್ಯ ಪ್ರಕೃತಿ ಉಳಿಸುವ ಕಾರ್ಯಮಾಡಬೇಕು: ಶಾಸಕ

» **ಹೊಸದುರ್ಗ**

ಈ ಬಾರಿ ರಾಜ್ಯದ್ಯಂತ ಉತ್ತಮ ಮಳೆಯಾಗಿದ್ದು, ಹಳ್ಳ ಕೊಳ್ಳ ನದಿಗಳು ಮೈದುಂಬಿ ಜಲಾಶಯಗಳು ಭರ್ತಿಯಾಗಿ ಹರಿಯುತ್ತಿವೆ. ಇದರಿಂದ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ.ಸ್ವಾತಂತ್ರ್ಯ ದಿನಾಚರಣೆ ಪ್ರತಿಯೊಬ್ಬ ಭಾರತೀಯರಿಗೂ ಸಡಗರ ಸಂಭ್ರಮದ ದಿನವಾಗಿದೆ. ಮನುಷ್ಯ ಪ್ರಕೃತಿಯ ವಿರುದ್ಧ ಹೋಗದೆ, ಅದನ್ನು ಉಳಿಸಿ ಬೆಳೆಸುವ ಕಾರ್ಯಮಾಡಬೇಕು. ಸ್ವಾತಂತ್ರ್ಯ ದಿನದಂದು ಪ್ರಕೃತಿ ಪ್ರೇಮಿಗಳಾಗಲು ಸಂಕಲ್ಪ ಮಾಡೋಣ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಸಲಹೆ ನೀಡಿದರು.

ತಾಲ್ಲೂಕು ಆಡಳಿತದ ವತಿಯಿಂದ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಗುರುವಾರ ಆಯೋಜಿಸಿದ್ದ '78 ನೇ ಸ್ವಾತಂತ್ರ್ಯ ದಿನಾಚರಣೆ ' ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.



ಸ್ವಾತಂತ್ರ್ಯೋತ್ಸವ ಒಂದು ದಿನದ ಆಚರಣೆ ಆಗಬಾರದು, ಶಾಲಾ ಕಾಲೇಜುಗಳಲ್ಲಿ ಬಿಡುವಿನ ಸಮಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಮಕ್ಕಳಿಗೆ ಪರಿಚಯ ಮಾಡಿಕೊಡಬೇಕು. ನಿತ್ಯವೂ ಹೋರಾಟಗಾರರ ಸ್ಮರಣೆ ಮಾಡಬೇಕು. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿತು, ದೇಶಕ್ಕೆ ಸತ್ಪ್ರಜೆಗಳಾಗಬೇಕು ಎಂದು ಕಿವಿಮಾತು ಹೇಳಿದರು.

ಧ್ವಜಾರೋಹಣ ನೆರವೇರಿಸಿ ತಹಶೀಲ್ದಾರ್ ತಿರುಪತಿ ಪಾಟೀಲ್ ಮಾತನಾಡಿ, ಭಾರತೀಯರಿಗೆ ಆಗಸ್ಟ್ 15 ಸುದಿನವಾಗಿದೆ. ನಾವು ಬ್ರಿಟಿಷರ ಒಡೆದು ಆಳುವ ನೀತಿಯಿಂದ ರಾಜಕೀಯ, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಶೋಷಣೆಗೆ ಒಳಗಾಗಿದ್ದೆವು. 78 ವರ್ಷದಿಂದ ಸ್ವತಂತ್ರವಾಗಿದ್ದೇವೆ. ಎಂದರು.ಈ ಸಂಧರ್ಬದಲ್ಲಿ ತಾ.ಪಂ. ಇಓ ಸುನೀಲ್ ಕುಮಾರ್, ನೌಕರ ಸಂಘದ ಅಧ್ಯಕ್ಷ ಆರ್. ಗಂಗಾಧರ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸೋಮಶೇಖರಯ್ಯ, ಡಾ: ನಧಾಪ್, ಪುರಸಭೆ ಸದಸ್ಯರುಗಳಾದ ಸ್ವಾತಿ ಪ್ರದೀಪ್, ಜಾಫರ್ ಸಾದಿಕ್, ಶಂಕ್ರಪ್ಪ, ರಾಜೇಶ್ವರಿ ಆನಂದ್, ದಾಳಿಂಬೆ ಗಿರೀಶ್, ಹೆಚ್. ರಾಮಚಂದ್ರಪ್ಪ, ನಾಗರಾಜ್, ಬಿಇಒ ಸೈಯದ್ ಮೋಸಿನ್, ಉದ್ಯಮಿ ಸದ್ಗುರು ಪ್ರದೀಪ್, ಸಮಾಜ ಸೇವಕ ತುಂಬಿನಕೆರೆಬಸವರಾಜ್ ತಾಲ್ಲೂಕುಮಟ್ಟದ ಅಧಿಕಾರಿಗಳು ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T